ವಿಜಯಪುರ | ಸಂಪುಟ 04 | ಸಂಚಿಕೆ 110 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಜೂನ್, 19, 2026

"ವಿಜಯಪುರ ಜಿಲ್ಲೆಯನ್ನು ಮಾದಕ ದ್ರವ್ಯ ಮುಕ್ತವಾಗಿಸಲು ಜಿಲ್ಲಾ ಪೊಲೀಸ್ ಇಲಾಖೆ ನಿರಂತರವಾಗಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುತ್ತಿದೆ. ಇದರ ಭಾಗವಾಗಿ ಜಿಲ್ಲೆಯಲ್ಲಿ ವಿಶೇಷ ಡ್ರೈವ್ ನಡೆಸಿ, ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವನೆಯಲ್ಲಿ ತೊಡಗಿದ್ದವರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದೆ."



■ ಲಕ್ಷ್ಮಣ ನಿಂಬರಗಿ
ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

# ಎಸ್ ಐಆರ್ ಯಶಸ್ವಿಗೊಳಿಸಲು ಎಡಿಸಿ ಡಾ.ಔದ್ರಾಮ ಸೂಚನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ, ಇದೇ ಜೂ. 20ರಿಂದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಗಳು ವಾಸ್ತವದಲ್ಲಿ ಪ್ರಾರಂಭವಾಗಲಿದ್ದು, ಜಿಲ್ಲೆಯ ಎಲ್ಲ 2092 ಮತಗಟ್ಟೆಗಳಿಗೆ ಮತಗಟ್ಟೆ ಅಧಿಕಾರಿಗಳು ಮತ್ತು ಪ್ರತಿ 10 ಮತಗಟ್ಟೆಗೆ ಒಬ್ಬರಂತೆ ಮತಗಟ್ಟೆ ಅಧಿಕಾ-ರಿಗಳ ಮೇಲ್ವಿಚಾರಕರು ಇರುವಂತೆ ನೋಡಿಕೊಂಡು ಪರಿಷ್ಕರಣೆ ಕಾರ್ಯ ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ-2026 ಮತದಾರರ ನೋಂದಣಾಧಿಕಾರಿ ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳವರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಯೋವೃದ್ಧರು ಅನಾರೋಗ್ಯದಿಂದ ಬಳಲುತ್ತಿರುವವರು, ವಿಶೇಷಚೇತನರು, ಬಡವರು ಹಾಗೂ ದುರ್ಬಲ-ರಿಗೆ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯದಲ್ಲಿ ವಯೋವೃದ್ಧರು, ಅನಾರೋಗ್ಯದಿಂದ ಬಳಲುತ್ತಿರುವವರು, ವಿಶೇಷಚೇತನರು, ಬಡವರು ಹಾಗೂ ದುರ್ಬಲರು ಸಕ್ರಿಯವಾಗಿ ಭಾಗವಹಿಸಲು ಸುಲಭವಾಗುವಂತೆ ಸ್ವಯಂ ಸೇವಕರನ್ನು ನಿಯೋಜಿಸಿಕೊಳ್ಳಬೇಕು ಎಂದರು.

ತಾಲೂಕಾ ಮಟ್ಟದಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ಜರುಗಿಸಿ, ಅವರಿಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ತಿಳುವಳಿಕೆ ನೀಡಿ, ಜಿಲ್ಲಾಧಿಕಾರಿ ಕಚೇರಿಗೆ ವರದಿ ಸಲ್ಲಿಸಬೇಕು ಎಂದ ಅವರು, ಎಸ್ ಐಆರ್ ಕಾರ್ಯದಲ್ಲಿ ನಿರ್ಲಕ್ಷ್ಯ ವಹಿಸಿದ ಅಧಿಕಾರಿ ಹಾಗೂ ಸಿಬ್ಬಂದಿ ವಿರುದ್ಧ ಪ್ರಜಾಪ್ರತಿನಿಧಿ ಕಾಯ್ದೆ-1950 ರಡಿ ಕ್ರಮ ಕೈಗೊಳ್ಳಲಾಗುವುದು ಎಂದರು.2002 ರ ಮತದಾರರ ಪಟ್ಟಿಯನ್ನು 2025 ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಮಾಡಲು ಇನ್ನು ಅವಕಾಶವಿದ್ದು, ಬಾಕಿ ಮತದಾರರ ಮ್ಯಾಪಿಂಗ್ ಕಾರ್ಯವನ್ನು ಕೈಗೊಳ್ಳಬೇಕು ಎಂದು ಸೂಚಿಸಿದ ಅಪರ ಜಿಲ್ಲಾಧಿಕಾರಿ ಅವರು, ಎಲ್ಲ ವಿಧಾನಸಭಾ ಮತಕ್ಷೇತ್ರದ ಎಲ್ಲ ಮತಗಟ್ಟೆ ಅಧಿಕಾರಿಗಳಿಗೆ ಇನ್ನೊಂದು ತರಬೇತಿ ನೀಡಬೇಕು ಎಂದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಮತಗಟ್ಟೆ ಏಜೆಂಟುರುಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಜಿಲ್ಲೆಯ ಎಲ್ಲ ವಿಧಾನಸಭಾ ಮತಕ್ಷೇತ್ರದ ಎಲ್ಲ ಮತಗಟ್ಟೆಗಳಿಗೆ ನೇಮಕಾತಿ ಕುರಿತು ಕ್ರಮ ವಹಿಸಬೇಕು ಎಂದರು. ಗಣತಿ ಫಾರ್ಮಗಳನ್ನು ಮತಗಟ್ಟೆ ಅಧಿಕಾರಿಗಳು, ಕಡ್ಡಾಯವಾಗಿ ಮತದಾರರಿಗೆ ಅಥವಾ ಸಂಬಂಧಿಕ-ರಿಗೆ ಮಾತ್ರ ನೀಡಲು ಸೂಚಿಸಿದರು. ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರನ್ನು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳನ್ನಾಗಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳವರನ್ನು ಆಯಾ ತಾಲೂಕುಗಳ ತಾಲೂಕಾ ಮಟ್ಟದ ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಲು ನಿರ್ಧರಿಸಲಾಗಿದೆ ಎಂದರು.

ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟದಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಮತದಾರರ ಪಟ್ಟಿಯಿಂದ ಯಾವುದೇ ಅರ್ಹ ಮತದಾರರ ಹೊರಗುಳಿಯದಂತೆ, ಅನರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರಿಸದಿರುವುದನ್ನು ಮತದಾರರ ಸೇರ್ಪಡೆ ಅಥ-'ವಾ ಹೆಸರನ್ನು ಅಳಿಸುವ ಪ್ರಕ್ರಿಯೆಯಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೊಳಿಸಲು ಪ್ರೇರೇಪಿಸಲು ಮತದಾರರು, ರಾಜಕೀಯ ಪಕ್ಷಗಳು, ನಾಗರಿಕ ಸಮಾಜ ಸಂಸ್ಥೆಗಳು, ಮೂಲ ನಿವಾಸಿಗಳ ಕಲ್ಯಾಣ ಸಂಘಗಳು, ಮಾಧ್ಯಮ ಸಂಸ್ಥೆಗಳು ವ್ಯಾಪಕವಾಗಿ ತಲುಪುವ ಉದ್ದೇಶದಿಂದ ಸಮಗ್ರ ಜಾಗೃತಿ ಅಭಿಯಾನಗಳ ಮೂಲಕ ವಿವಿಧ ರೀತಿಯ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲು ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಇದೇ ವೇಳೆ ವಿನಂತಿಸಲಾಯಿತು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ಕುರಿತು ತೆಗೆದುಕೊಂಡ ಕ್ರಮಗಳ ಕುರಿತು ಸಾಮಾಜಿ-ಕ ಮಾಧ್ಯಮಗಳ ಮೂಲಕ ಜನರಿಗೆ ತಿಳುವಳಿಕೆ ನೀಡಬೇಕು ಎಂದು ಡಾ. ಔದ್ರಾಮ ತಿಳಿಸಿದರು. ಬಿಎಲ್ ಒ ಫೆಸಿಲಿಟೇಶನ್ ಸೆಂಟರ್ ಗಳನ್ನು ತಾಂತ್ರಿಕ ಸಹಾಯ ಬಯಸುವ ಬಿಎಲ್ ಒಗಳಿಗೆ ಅಗತ್ಯ ದಾಖಲೆಗಳನ್ನು ಅಪ್‌ಲೋಡ್ ಮಾಡಲು ತಾಂತ್ರಿಕ ನೆರವನ್ನು ಒದಗಿಸುವ ಕುರಿತು, ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಗ್ರಾಮ ಆಡಳಿತಾಧಿಕಾರಿ ಕಚೇರಿ, ಪಂಚಾಯತ್ ಕಟ್ಟಡಗಳು, ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ವಿವಿಧ ಯೋಜನೆಗಳಡಿ ಅನುದಾನ ಪಡೆದು ನಿರ್ಮಿಸಿರುವ ಸಮುದಾಯ ಭವನಗಳು, ನಗರ ಪ್ರದೇಶಗಳಲ್ಲಿ ವಾರ್ಡ್ ಕಚೇ-ರಿಗಳು, ಮುಖ್ಯ ಪೌರಾಯುಕ್ತರ ಕಚೇರಿಗಳು, ತಾಲ್ಲೂಕು ಕೇಂದ್ರದಲ್ಲಿ ತಾಲ್ಲೂಕು ಕಚೇರಿ (ತಹಶೀಲ್ದಾರರ ಕಚೇರಿ), ಗ್ರಾಮಒನ್, ನಾಡ ಕಚೇರಿಗಳಲ್ಲಿ ಬಿಎಲ್ ಒ ಸೆಂಟರ್ ಗಳನ್ನು ಸ್ಥಾಪಿಸಿಕೊಳ್ಳಲು ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳವರಿಗೆ ಅಪರ ಜಿಲ್ಲಾಧಿಕಾರಿ ಸೂಚಿಸಿದರು. ವೋಟರ್ ಫೆಸಿಲಿಟೇಶನ್ ಸೆಂಟರ್ ಗಳನ್ನು ಮತದಾರರಿಗೆ ಸುಲಭವಾಗಿ ಹಾಗೂ ಸಾಧ್ಯವಾಗಿರುವಂತಹ ಸಂಬಂಧಪಟ್ಟ ಮತಗಟ್ಟೆಗಳಲ್ಲಿ ಸ್ಥಾಪಿಸಿ, ಮತದಾರ-ರಿಗೆ ಸಹಾಯವಾಗುವಂತೆ ವ್ಯವಸ್ಥೆ ಮಾಡುವುದು ಬಿಎಲ್ ಒಗಳಿಗೆ ವಹಿಸಿಕೊಟ್ಟು, ಮೇಲುಸ್ತುವಾರಿ ನೋಡಿಕೊಳ್ಳಲು ಸೂಚಿಸಿದರು.

ಸಭೆಯಲ್ಲಿ ಜಿಲ್ಲೆಯ ನೋಂದಣಾಧಿಕಾರಿಗಳಾದ ವಿಜಯ ಮೆಕ್ಕಳಕಿ, ರಾಜಶೇಖರ ಡಂಬಳ, ವಿನಯ ಪಾಟೀಲ, ಗುರುನಾಥ ದಡ್ಡೆ, ಚಿದಾನಂದ ಗುರುಸ್ವಾಮಿ, ಸಹಾಯಕ ಮತದಾರರ ನೋಂದಣಾಧಿಕಾರಿಗಳು ಸೇ-ರಿದಂತೆ ಜಿಲ್ಲೆಯ ಎಲ್ಲ ತಹಶೀಲದಾರರು ಮತ್ತು ಮತಕ್ಷೇತ್ರದ ತರಬೇತುದಾರರು ಹಾಜರಿದ್ದರು.

# ಜೂನ್ 20-21ರಂದು ಪತಂಜಲಿ ಯೋಗ ತರಬೇತಿ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಪ್ರತಿ ವರ್ಷದಂತೆ ಈ ವರ್ಷವೂ ಪಟ್ಟಣದ ವಿಶ್ವಭಾರತಿ ವಿದ್ಯಾವರ್ಧಕ ಸಂಸ್ಥೆಯ ಆವರಣದಲ್ಲಿ ವಿಶ್ವ ಯೋಗ ದಿನಾಚರಣೆಯ ಅಂಗವಾಗಿ ಪತಂಜಲಿ ಯೋಗ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘಟಕರಾದ ಈರಯ್ಯ ಹಲಗಯ್ಯ ಮಠಪತಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೂನ್ 20 ಮತ್ತು 21ರಂದು ಎರಡು ದಿನಗಳ ಕಾಲ ಬೆಳಿಗ್ಗೆ 6 ರಿಂದ 7 ಗಂಟೆಯವರೆಗೆ ತರಬೇತಿ ನಡೆಯಲಿದ್ದು, ಮಾಜಿ ಸಚಿವರು ಹಾಗೂ ಯೋಗ ಶಿಕ್ಷಕರಾದ ಎಸ್.ಕೆ. ಬೆಳ್ಳುಬ್ಬಿ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಜರುಗಲಿದೆ ಎಂದು ಹೇಳಿದರು.ಈ ತರಬೇತಿಯಲ್ಲಿ ಶಾಲಾ ಮಕ್ಕಳು ಹಾಗೂ ಊರಿನ ಸಾರ್ವಜನಿಕರು ಭಾಗವಹಿಸಿ ಯೋಗದ ಮಹತ್ವವನ್ನು ಅರಿತು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಮಾಜಿ ಅಧ್ಯಕ್ಷರಾದ ಕಲ್ಲಪ್ಪ ಶಿ. ಸೊನ್ನದ, ವಿರುಪಾಕ್ಷೀ ನಾ. ಕೊಲಕಾರ, ಸಂಗಪ್ಪ ಹುಚ್ಚಪ್ಪಗೋಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ವಿಜಯಪುರ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ | ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚನೆ**

# ಬ್ಯಾಂಕಿನಲ್ಲಿ ಅರ್ಜಿಗಳನ್ನು ಬಾಕಿ ಉಳಿಸಿಕೊಳ್ಳದೇ ಇತ್ಯರ್ಥಪಡಿಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸರ್ಕಾರದಿಂದ ಅನುಷ್ಠಾನಗೊಳ್ಳುವ ಯೋಜನೆಗೆ ಸಂಬಂಧಿಸಿದಂತೆ ಬ್ಯಾಂಕಿನಲ್ಲಿ ಅರ್ಹ ಫಲಾನುಭವಿಗಳ ಅರ್ಜಿಗಳನ್ನು ಬಾಕಿ ಉಳಿಸಿಕೊಳ್ಳದೇ ನಿಗದಿತ ಅವಧಿಯಲ್ಲಿ ಇತ್ಯರ್ಥಪಡಿಸಬೇಕು ಎಂದು ಜಿಲ್ಲಾಧಿಕಾ-ರಿಗಳಾದ ಡಾ.ಆನಂದ ಕೆ. ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಜಿಲ್ಲಾ ಮಟ್ಟದ ದೌರ್ಜನ್ಯ ನಿಯಂತ್ರಣ 1989 ಪ್ರತಿಬಂಧ ಕಾಯ್ದೆಯಡಿ ರಚಿತವಾದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ಮೂರು ತಿಂಗಳಿಗೊಮ್ಮೆ ಬ್ಯಾಂಕಿನ ಅಧಿಕಾರಿಗಳ ಸಭೆ ನಡೆಸಲಾಗುತ್ತಿದೆ. ಈ ಬಗ್ಗೆ ನಿರಂತರ ಪ್ರಗತಿ ವರದಿ ಅವಲೋಕಿಸಲಾಗುತ್ತಿದೆ. ಜಿಲ್ಲೆಯ ವಿವಿಧ ಬ್ಯಾಂಕಿನ ಶಾಖಾ ವ್ಯವಸ್ಥಾಪಕರೊಂದಿಗೆ ವಿವಿಧ ಸರ್ಕಾರದ ಯೋಜನೆಯಡಿ ಫಲಾನುಭವಿಗಳ ಬಾಕಿ ಅರ್ಜಿ ಸ್ಥಿತಿಗತಿ ಕುರಿತು ಅಗ್ರಣೀಯ ಬ್ಯಾಂಕಿನ ಅಧಿಕಾ-ರಿಗಳು ಕಾಲ-ಕಾಲಕ್ಕೆ ಸಭೆ ನಡಸಬೇಕು. ಈ ವಿಷಯದಲ್ಲಿ ವಿನಾ ಕಾರಣ ವಿಳಂಬ ಆಗದಂತೆ ಕ್ರಮ ಕೈಗೊಳ್ಳಬೇಕು ಎಂದು ಅಗ್ರಣೀಯ ಬ್ಯಾಂಕ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಸಭೆಯಲ್ಲಿ ಚರ್ಚೆಯಾದ ವಿಷಯದ ಸಮಸ್ಯೆಗಳನ್ನು ತಕ್ಷಣ ಇತ್ಯರ್ಥಪಡಿಸಬೇಕು ಎಂದು ಸಭೆಯಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದರು.

ದೌರ್ಜನ್ಯ ಪ್ರಕರಣಗಳಲ್ಲಿ ವಿಳಂಬ ಮಾಡದೇ ಪರಿಹಾರ ಒದಗಿಸಬೇಕು ಎಂದರು.

ನೀರಾವರಿ ಪಂಪಸೆಟ್ ಅರ್ಜಿ ಪರಿಶೀಲಿಸಿ ವಿದ್ಯುತ್ ಪರಿವರ್ತಕ ಅಳವಡಿಸಲು ಕ್ರಮವಹಿಸಬೇಕು. ಪರಿಶಿಷ್ಟ ಜಾತಿ ಸಮುದಾಯದವರು ವಾಸಿಸುವ ಕಾಲೊನಿಯಲ್ಲಿ ಕುಡಿಯುವ ನೀರಿನ ಅಭಾವವಾಗದಂತೆ ಸಮರ್ಪಕವಾಗಿ ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕು ಎಂದರು.

ಚರಂಡಿ ನೀರು ಸರಾಗವಾಗಿ ಹ-ರಿಯಲು ಇರುವ ತೊಂದರೆಯನ್ನು ನಿವಾ-ರಿಸಿಕೊಂಡು ಸಮಸ್ಯೆ ಪರಿಹರಿಸಬೇಕೆಂದು ಸೂಚಿಸಲಾಯಿತು.

ಸಮಾಜದ ಮುಖಂಡರೊಂದಿಗೆ ಸಮಿತಿ ಸಭೆಯನ್ನು ಕಾಲಕಾಲಕ್ಕೆ ನಡೆಸಬೇಕು. ಅರ್ಹರಿಗೆ ಸೂರು ಒದಗಿಸಲು ಗ್ರಾಮ ಸಭೆ ನಡೆಸಿ ಪಾರದರ್ಶಕವಾಗಿ ಫಲಾನುಭವಿಗಳನ್ನು ಆಯ್ಕೆ ಮಾಡಿ, ವಿವಿಧ ಯೋಜನೆಯಡಿ ಅರ್ಜಿ ಸಲ್ಲಿಸುವ ಅರ್ಹ ಫಲಾನುಭವಿಗಳ ಅರ್ಜಿ ಪರಿಶೀಲನೆ ನಡೆಸಿ ವಿಳಂಬ ಮಾಡದೇ ತಕ್ಷಣ ವಿಲೇವಾರಿ ಮಾಡಬೇಕು ಎಂದರು.

ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಪರಿಹಾರ ಧನ ವಿತರಣೆಯಲ್ಲಿ ವೃಥಾ ವಿಳಂಬ ಮಾಡದೇ, ತ್ವರಿತಗತಿಯಲ್ಲಿ ಪರಿಹಾರ ಒದಗಿಸಬೇಕು ಎಂದರು. ಜನವರಿಯಿಂದ ಮೇ ತಿಂಗಳವರೆಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ದೌರ್ಜನ್ಯ ಅಧಿನಿಯಮ 1989ರನ್ವಯ ದಾಖಲಾದ ಪ್ರಕರಣಗಳ ಮಾಹಿತಿ ಸಭೆಗೆ ನೀಡಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ, ಹೆಚ್ಚುವರಿ ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿಗಳಾದ ರಾಮನಗೌಡ ಹಟ್ಟಿ, ವಿಜಯಪುರ ಉಪ ವಿಭಾಗಾಧಿಕಾ-ರಿಗಳಾದ ಗುರುನಾಥ ದಡ್ಡೆ, ಇಂಡಿ ಉಪ ವಿಭಾಗಾಧಿಕಾರಿ ಗುರುಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಹೇಶ ಪೋತದಾರ, ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರಾದ ಅಭಿಷೇಕ ಚಕ್ರವರ್ತಿ, ನಾನು ಸೋಮು ಲಮಾಣಿ, ರವಿಕಾಂತ ಬಿರಾದಾರ, ಸಿದ್ದು ರಾಯಣ್ಣವರ, ಬಂದಗಿ ಸಿದ್ದಪ್ಪ ಗಸ್ತಿ, ಯಮನಪ್ಪ ಸಿದರಡ್ಡಿ, ಮಲ್ಲು ತಳವಾರ, ರಾಜಶೇಖರ ಕೂಚಬಾಳ ಹಾಗೂ ಮಲ್ಲಪ್ಪ ಹಾದಿಮನಿ ಸೇ-ರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

**ವಿಜಯಪುರದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಪಂ ಸಿಇಒ ರಿಷಿ ಆನಂದ ಅಧಿಕಾರಿಗಳಿಗೆ ಸೂಚನೆ**

# ಅತ್ಯವಶ್ಯಕತೆನುಸಾರ ಬೋರ್ ವೆಲ್ ಕೊರೆಯಿಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯಾದ್ಯಂತ ಕೊರೆಸಲಾಗಿರುವ 43 ಕೊಳವೆ ಬಾವಿಗಳಿಗೆ ಆದ್ಯತೆ ಮೇರೆಗೆ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಮುಂದಿನ ದಿನಗಳಲ್ಲಿ ಮಳೆ ಅಭಾವ ಉಂಟಾಗುವ ಸಾಧ್ಯತೆ ಇರುವುದರಿಂದ ಅತ್ಯವಶ್ಯಕ ಪರಿಸ್ಥಿತಿಯಲ್ಲಿ ಮಾತ್ರ ಹೊಸ ಕೊಳವೆ ಬಾವಿ ಕೊರೆಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಾಧಿಕಾರಿಗಳಾದ ರಿಷಿ ಆನಂದ ಹೇಳಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವಿವಿಧ ಯೋಜನೆಗಳು ಹಾಗೂ ಘಟಕಾಂಶಗಳ ಕುರಿತು ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಲ ಜೀವನ್ ಮಿಷನ್ ಹಾಗೂ ಟಾಸ್ಕ್ ಫೋರ್ಸ್ ಕಾಮಗಾರಿಗಳಿಗೆ ಸಂಬಂಧಿಸಿದಂತೆ ನಿಗದಿತ ಭೌತಿಕ ಹಾಗೂ ಆರ್ಥಿಕ ಪ್ರಗತಿ ಸಾಧಿಸಿ, ಬಾಕಿ ಇರುವ ಬಿಲ್ಲುಗಳನ್ನು ತ್ವ-ರಿತವಾಗಿ ವಿಭಾಗೀಯ ಕಚೇರಿಗೆ ಸಲ್ಲಿಸುವಂತೆ ಸೂಚಿಸಿದರು.

ಸುಜಲಾಂ ಗಾವ್ (ಆರ್ ಪಿಡಬ್ಲ್ಯೂ ಎಸ್ ಎಸ್) ಯೋಜನೆಯಡಿ ಐಡಿ ಕ್ರಿಯೇಷನ್ ಪ್ರಕ್ರಿಯೆಯನ್ನು ರಾಜ್ಯ ಕಚೇರಿಯೊಂದಿಗೆ ಸಮನ್ವಯ ಸಾಧಿಸಿ ಪೂರ್ಣಗೊಳಿಸಬೇಕು. ಜಿಲ್ಲೆಯಲ್ಲಿ ಸೃಜಿಸಲಾದ ಆಸ್ತಿಗಳ ವಿವರಗಳನ್ನು ಜಿಪಿಎಸ್ ಆಧಾರಿತ ಛಾಯಾಚಿತ್ರಗಳ ಮೂಲಕ ಸಂಬಂಧಿತ ದಾಖಲಿಸುವ ಕಾರ್ಯಕ್ಕೆ ವೇಗ ನೀಡಬೇಕು ಎಂದು ಸೂಚಿಸಿದ ಸಿಇಒ ಅವರು, ಈ ನಿಟ್ಟಿನಲ್ಲಿ ಸಹಾಯಕ ಹಾಗೂ ಕಿರಿಯ ಅಭಿಯಂತರರಿಗೆ ಗುರಿ ನಿಗದಿಪಡಿಸಿ ವಾರದೊಳಗೆ ಗಣನೀಯ ಪ್ರಗತಿ ಸಾಧಿಸುವಂತೆ ಎಲ್ಲ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ಸೂಚನೆ ನೀಡಿದರು.

ಐಎಂಐಎಸ್ ವ್ಯವಸ್ಥೆಯಲ್ಲಿ ಜಲ ಜೀವನ್ ಮಿಷನ್ ಯೋಜನೆಗಳ ಭೌತಿಕ ಹಾಗೂ ಆರ್ಥಿಕ ಪೂರ್ಣತೆಯ ದಾಖಲೆಗಳನ್ನು ಪರಿಶೀಲಿಸಿ, ಅವುಗಳನ್ನು ಜಲ ಜೀವನ್ ಮಿಷನ್ ಪೋರ್ಟಲ್‌ನಲ್ಲಿ ತಕ್ಷಣವೇ ದಾಖಲಿಸುವಂತೆ ವಿಭಾಗ ಕಚೇರಿಯ ಕಾರ್ಯನಿರ್ವಾಹಕ ಅಭಿಯಂತರರಿಗೆ ಸೂಚಿಸಿದರು.

"ಹರ್ ಘರ್ ಜಲ್" ಅಭಿಯಾನದ ಕುರಿತು ವಿಶೇಷವಾಗಿ ಚರ್ಚಿಸಿದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರ ನಿರ್ದೇಶನದಂತೆ ಜೂ. 17 ರಿಂದ 30 ರವರೆಗೆ ಜಿಲ್ಲೆಯಾದ್ಯಂತ "ಹರ್ ಘರ್ ಜಲ್ ಅಭಿಯಾನ"ವನ್ನು ತೀವ್ರಗತಿಯಲ್ಲಿ ಅನುಷ್ಠಾನಗೊಳಿಸುವಂತೆ ಸೂಚಿಸಲಾಗಿದೆ. ಹಾಗಾಗಿ ಜಿಲ್ಲೆ ಹಾಗೂ ತಾಲೂಕು ಮಟ್ಟದ ವಿವಿಧ ಅಧಿಕಾರಿಗಳಿಗೆ ಗ್ರಾಮ ಪಂಚಾಯಿತಿಗಳನ್ನು ಹಂಚಿಕೆ ಮಾಡಿ ಕಾರ್ಯಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಕೈಗೊಳ್ಳಬೇಕು ಎಂದು ಸಿಇಒ ಸೂಚಿಸಿದರು.ಜಿಲ್ಲೆಗೆ ಹೆಚ್ಚಿನ ಅನುದಾನ ದೊರೆಯಲು "ಹರ್ ಘರ್ ಜಲ್" ಯೋಜನೆಯ ಪ್ರಗತಿ ಅತ್ಯಂತ ಮಹತ್ವದ್ದಾಗಿದ್ದು, ಪ್ರತಿವಾರ ಕನಿಷ್ಠ 20 ಗ್ರಾಮಗಳಲ್ಲಿ ವರದೀಕರಣ ಹಾಗೂ ಪ್ರಮಾಣೀಕರಣ ಕಾರ್ಯ ಪೂರ್ಣಗೊಳಿಸುವಂತೆ ಸಹಾಯಕ ಮತ್ತು ಕಿರಿಯ ಅಭಿಯಂತರರಿಗೆ ಗುರಿ ನಿಗದಿಪಡಿಸುವಂತೆ ಸೂಚಿಸಿದರು.

ಇದೇ ವೇಳೆ, ಕುಡಿಯುವ ನೀರಿನ ಗುಣಮಟ್ಟ ಮೇಲ್ವಿಚಾರಣೆಗೆ ಹೆಚ್ಚಿನ ಒತ್ತು ನೀಡಲಾಗಿದೆ. ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪ್ರತಿ ಗ್ರಾಮದಿಂದ ಎರಡು ಮನೆಗಳ ನಲ್ಲಿ ಸಂಪರ್ಕಗಳ ನೀರಿನ ಮಾದರಿಗಳನ್ನು ಹಾಗೂ ಶಾಲೆ, ಅಂಗನವಾಡಿ ಸೇರಿದಂತೆ ಸಾರ್ವಜನಿಕ ಸಂಸ್ಥೆಗಳ ನೀರಿನ ಮಾದ-ರಿಗಳನ್ನು ಪ್ರತಿ ತಿಂಗಳು ಎಫ್ ಟಿಕೆ ಕಿಟ್ ಮತ್ತು ಎ2ಎಸ್ ವಿಲ್ಸ್ ಮೂಲಕ ಪರೀಕ್ಷಿಸಿ ಡಬ್ಲ್ಯೂ ಕ್ಯೂಎಂಐಎಸ್-ಐಎಂಐಎಸ್ ಪೋರ್ಟಲ್ ನಲ್ಲಿ ದಾಖಲಿಸಬೇಕು. ಜೊತೆಗೆ, ಇಲಾಖೆಯ ಪ್ರಯೋಗಾಲಯಗಳಲ್ಲಿ ಮೇಲ್ಮೈ ನೀರಿನ ಮಾದರಿಗಳನ್ನು ಪ್ರತಿ ಆರು ತಿಂಗಳಿಗೊಮ್ಮೆ ಹಾಗೂ ಅಂತರ್ಜಲ ಮಾದರಿಗಳನ್ನು ವರ್ಷಕ್ಕೆ ಎರಡು ಬಾರಿ ಕಡ್ಡಾಯವಾಗಿ ಪರೀಕ್ಷಿಸಬೇಕು ಎಂದು ಪ್ರಯೋಗಾಲಯ ಸಿಬ್ಬಂದಿಗೆ ಸಿಇಒ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರಾದ ಸಂ-ಜಯ ಕೋಟೆನ್ನವರ, ಜಿಲ್ಲೆಯ ಎಲ್ಲ ಉಪ ವಿಭಾಗಗಳ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಅಭಿಯಂತರರು, ಕಿರಿಯ ಅಭಿಯಂತರರು, ವಿಷಯ ನಿರ್ವಾಹಕರು, ಡಿಪಿಎಂ, ಐಎಂಐಎಸ್ ಸಿಬ್ಬಂದಿ ಹಾಗೂ ತಾಂತ್ರಿಕ ಸಿಬ್ಬಂದಿ ಉಪಸ್ಥಿತರಿದ್ದರು.

# ಸರ್ಕಾರಿ ಶಾಲಾ ಮಕ್ಕಳಿಗೆ ರೂ.1 ಲಕ್ಷ ವೆಚ್ಚದ ನೋಟಬುಕ್ ವಿತರಣೆ

■ ಉದಯರಶ್ಮಿ ದಿನಪತ್ರಿಕೆ



ಬಬಲೇಶ್ವರ: ಹಿಂದುಳಿದ ಹಳ್ಳಿಯ ಸಾಮಾನ್ಯ ಕುಟುಂಬದ ಚೆನ್ನಬಸಪ್ಪ ಅಂಬಲಿ, ಸ್ವಾತಂತ್ರ್ಯ ಹೋರಾಟದಲ್ಲಿ ಧುಮುಕಿ, ನಿರಂತರ ತೀವ್ರಗಾಮಿ ಚಟುವಟಿಕೆಗಳನ್ನು ನಡೆಸಿ, ಹಲವಾರು ಬಾರಿ ಜೈಲುವಾಸ ಅನುಭವಿಸಿ, ಸ್ವಾತಂತ್ರ್ಯಾನಂತರವೂ ಕಾಂಗ್ರೆಸ್ ನಲ್ಲಿ ಸಕ್ರಿಯರಾಗಿ ಕೆಪಿಸಿಸಿ ಅಧ್ಯಕ್ಷ ಚುನಾವಣೆಯಲ್ಲಿ ಧಿಮಂತ ನಾಯಕ ಎಸ್.ನಿಜಲಿಂಗಪ್ಪನವರನ್ನು ಸೋಲಿಸಿದ ಹೆಗ್ಗಳಿಕೆ ಹೊಂದಿದ್ದಾರೆ ಎಂದು ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ.ಮಹಾಂತೇಶ ಬಿರಾದಾರ ಹೇಳಿದರು.

ಬಬಲೇಶ್ವರ ತಾಲ್ಲೂಕಿನ ಅರ್ಜುಣಗಿಯ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಬುಧವಾರ ಅಂಬಲಿ ಕುಟುಂಬದವರು 1 ಲಕ್ಷ ರೂಪಾಯಿ ವೆಚ್ಚದಲ್ಲಿ ಶಾಲಾ ಮಕ್ಕಳಿಗೆ ನೋಟ್ ಬುಕ್ ವಿತರಣೆ ಉದ್ಘಾಟಿಸಿ ಮಾತನಾಡಿದ ಅವರು, ಈ ಭಾಗದಲ್ಲಿ ಅತೀ ಬರಗಾಲ ಬಿದ್ದು ಜನರಿಗೆ ಆಹಾರ ಕೊರತೆಯಾದಾಗ ತಮ್ಮ ಮನೆಯ ದವಸ-ಧಾನ್ಯಗಳಿಂದ ಜನರಿಗೆ ಅಂಬಲಿ ತಯಾರಿಸಿ ನೀಡಿದ್ದರಿಂದ 'ಬಣಜಿಗೇರ' ಎಂಬ ಇವರ ಮನೆತನದ ಹೆಸರು 'ಅಂಬಲಿ'ಯಾಗಿ ಬದಲಾವಣೆಯಾಯಿತು. ಅದೇ ಕುಟುಂಬದ ಚೆನ್ನಬಸಪ್ಪ ಬಾಲಕನಾಗಿದ್ದಾಗಲೇ ಕಂದಾಯ ವಸೂಲಿಗೆ ಬಂದಿದ್ದ ಮಾಮಲೆದಾರರನ್ನು ತರಾಟೆಗೆ ತೆಗೆದುಕೊಂಡು "ಬರಗಾಲದಿಂದ ಜನ ಸಾಯುತ್ತಿದ್ದಾರೆ. ಇಂಥ-'ಹ ಕೆಟ್ಟ ಸ್ಥಿತಿಯಲ್ಲಿ ನಿಮಗೆ ಕಂದಾಯ ಕೊಡಬೇಕೆ?" ಎಂದಿದ್ದರು. ಅಲ್ಲಿಂದ ಆರಂಭಗೊಂಡ ಅವರ ಹೋರಾಟ ದೇಶಕ್ಕೆ ಸ್ವಾತಂತ್ರ್ಯ ಬರುವವರೆಗೂ ನಿರಂತರವಾಗಿತ್ತು. ಹೋರಾಟಗಾರರೊಂದಿಗೆ ಭೂಗತರಾಗಿ, ಮಿಂಚನಾಳ, ಜುಮನಾಳ, ಮುಳವಾಡ ರೈಲ್ವೆ ನಿಲ್ದಾಣಗಳನ್ನು ಧ್ವಂಸಗೊಳಿಸಿ, ಬ್ರಿಟಿಷರಿಗೆ ಬಿಜಾಪುರ ಜಿಲ್ಲೆಯಲ್ಲಿ ಉಗ್ರ ಪ್ರತಿರೋಧ ಒಡ್ಡಿದ್ದರು ಎಂದರು.

ಮುಂಬೈ ಪ್ರಾಂತ್ಯದಲ್ಲಿ ಬಾದಾಮಿ, ಬೀಳಗಿಯಿಂದ ನಂತರ ಮೈಸೂರು ರಾಜ್ಯದಲ್ಲಿ ತಿಕೋಟಾದಿಂದ ಶಾಸನಸಭೆಗೆ ಆಯ್ಕೆಯಾಗಿದ್ದ ಇವರು, ನಿಜಲಿಂಗಪ್ಪನವರ ಮಂತ್ರಿಮಂಡಲದಲ್ಲಿ ಸೇರ್ಪಡೆಯಾಗುವ ಮುಂಚೆಯೇ ಪಾರ್ಶ್ವವಾಯುಗೆ ತುತ್ತಾಗಿ, ಮಂತ್ರಿಯಾಗದೆ ಉಳಿದರು. ಇಂದು ನಾವು ಅನುಭವಿಸುವ ಸ್ವಾತಂತ್ರ್ಯ ಅಂಬಲಿ ಚೆನ್ನಬಸಪ್ಪನವರಂತಹ ನಿಸ್ವಾರ್ಥ ಹೋರಾಟಗಾರರ ಫಲ. ಇವರನ್ನು ನಾವು ಮರೆತಿದ್ದೇವೆ ಎಂದು ಹೇಳಿದರು.

ಕ್ಷೇತ್ರಶಿಕ್ಷಣಾಧಿಕಾರಿ ಬಸವರಾಜ ತಳವಾರ ಮಾತನಾಡಿ, ಅಂಬಲಿ ಕುಟುಂಬದ ಆದರ್ಶವನ್ನು ಈಗೀನ ತಲೆಮಾರಿನವರು ಮುಂದುವರೆಸಿದ್ದು, ಈ ವರ್ಷದಿಂದ ಇನ್ನು ಮುಂದೆ ಪ್ರತಿವರ್ಷವೂ ಒಂದು ಲಕ್ಷ ರೂಪಾಯಿಗಳನ್ನು ವ್ಯಯಿಸಿ, ತಮ್ಮ ಅರ್ಜುಣಗಿ ಗ್ರಾಮದ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲತೆಗಳನ್ನು ಕಲ್ಪಿಸುತ್ತಿರುವುದು ಮಾದರಿ. ಇದನ್ನು ಉಳಿದ ಹಳ್ಳಿಗಳಲ್ಲಿ ಬೇರೆಯವರು ಅನುಸರಿಸಬೇಕು ಎಂದರು.

ಪ್ರಾಚಾರ್ಯ ಎಲ್.ಪಿ.ಹುಣಶಿಕಟ್ಟಿ ಅಧ್ಯಕ್ಷತೆ ವಹಿಸಿದ್ದರು. ಶೇಖರ ಅಂಬಲಿ, ಪ್ರೊ.ಸುರೇಶ ಅಂಬಲಿ, ರಮೇಶ ದೇಸಾಯಿ, ಮಲ್ಲು ಕೆಂಪವಾಡ, ಶೇಖಪ್ಪ ದೇಸಾಯಿ, ಚೆನ್ನಬಸಪ್ಪ ಅಂಬಲಿ, ರಫೀಕ ಸೋನಾರ, ಉಮಾಕಾಂತ ತಡಾಕಿ, ಸಿದ್ದರಾಯ ಜಂಗಮಶೆಟ್ಟಿ, ರಮೇಶ ತಂಬಾಕ್, ಮಲ್ಲೇಶಿ ಮೋಟಗಿ, ಎಸ್.ಎಸ್.ಮಠಪತಿ, ಸಿದರಾಯ ಅಥಣಿ ಮತ್ತಿತರರು ಗ್ರಾಮಸ್ಥರು ಉಪಸ್ಥಿತ-ರಿದ್ದರು.

ನಿರ್ಮಲಾ ದೊಡಮನಿ ಹಾಗೂ ವನಜಾಕ್ಷಿ ಬಡಿಗೇರ ನಿರೂಪಿಸಿದರು, ರಮೇಶ ಕುಂಬಾರ ಸ್ವಾಗತಿಸಿದರು.



**ಕೂಡಗಿಯಲ್ಲಿ ಶಾಸಕ ಶಿವಾನಂದ ಪಾಟೀಲ ಭರವಸೆ**

# ಈರುಳ್ಳಿ ಖರೀದಿ-ಮಾರಾಟಕ್ಕೆ ಅಂತರಾಷ್ಟ್ರೀಯ ಮಾರುಕಟ್ಟೆ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ದೇಶದೆಲ್ಲೆಡೆ ಖ್ಯಾತಿ ಗಳಿಸಿರುವ ಈ ಭಾಗದ ರೈತರ ವಿಳ್ಯದೆಲೆ ಮತ್ತು ಈರುಳ್ಳಿ ಖರೀದಿ ಮತ್ತು ಮಾರಾಟಕ್ಕಾಗಿ ಅಂತರಾಷ್ಟ್ರೀಯ ಮಾರುಕಟ್ಟೆಯನ್ನು ಕೂಡಗಿಯಲ್ಲಿ ನಿರ್ಮಿಸುವ ಚಿಂತನೆಯಿದ್ದು ಭವಿಷ್ಯದಲ್ಲಿ ಅದನ್ನು ನಿರ್ಮಿಸುವ ಯೋಜನೆ ಇದೆ ಎಂದು ಶಾಸಕ ಶಿವಾನಂದ ಪಾಟೀಲ ಭರವಸೆ ನೀಡಿದರು.

ಕೂಡಗಿ ಗ್ರಾಮದ ಮಾರುತೇಶ್ವರ ದೇವಸ್ಥಾನ ಬಳಿ ಸಮುದಾಯ ಭವನ, ಎಪಿಎಂಸಿ ಬಳಿ ಸಿಸಿ ರಸ್ತೆ, ಕೂಡಗಿ ತಾಂಡಾದ 2 ಕಡೆಗಳಲ್ಲಿ ಸಿಸಿ ರಸ್ತೆ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಈ ಭಾಗದ ಜನ ಎನ್‌ಟಿಪಿಸಿಗಾಗಿ ತಮ್ಮ ಫಲವತ್ತಾದ ಜಮೀನನ್ನು ಕಳೆದುಕೊಂಡಿದ್ದಾರೆ. ಆದರೆ ಅದಕ್ಕೆ ತಕ್ಕ ಪ್ರತಿಫಲ ಅವರಿಗೆ ಎನ್‌ಟಿಪಿಸಿ ಇನ್ನೂ ನೀಡಿಲ್ಲ ಎಂದರು. ಕೂಡಗಿ ತಾಂಡಾದಲ್ಲಿ 33 ಕೊಳವೆ ಭಾವಿಗಳಿದ್ದರೂ ಸ್ಥಳೀಯ ನಿವಾಸಿಗರಿಗೆ ಕುಡಿಯುವ ನೀರಿನ ತೊಂದರೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿದ ಶಾಸಕರು, ಗ್ರಾಪಂ ಅಭಿವೃದ್ಧಿ ಅಧಿಕಾರಿಗೆ ಕುಡಿಯುವ ನೀರಿನ ಬಗ್ಗೆ ಯಾವುದೇ ತೊಂದರೆಯಾಗದಂತೆ ಎಚ್ಚರಿಕೆ ವಹಿಸುವಂತೆ ಸೂಚಿಸಿದರು.

ವೇ.ಗಂಗಾಧರಯ್ಯ ಹಿರೇಮಠ ಪೂಜೆ ನೆರವೇರಿಸಿದರು.

ಪ್ರಮುಖರಾದ ಮೈರಾಜಪೀರಾ ಜಾಗೀರದಾರ, ತಾನಾಜಿ ನಾಗರಾಳ, ಕಲ್ಲು ದೇಸಾಯಿ, ರಫೀಕ ಪಕಾಲಿ, ಧರ್ಮಣ್ಣ ಬಿದರಿ, ಶಿವಪ್ಪ ಗುಡದಿನ್ನಿ, ಚಂದ್ರಶೇಖರ ಜುಗತಿ, ಸಂಗನಗೌಡ ಪಾಟೀಲ, ಮಹ್ಮದಆರೀಪ್ ತಾಳಿಕೋಟಿ, ರಾಜು ರಾಠೋಡ, ಈಶ್ವರ ಜಾಧವ, ಬಾಬು ಕೋಲಾರ, ಶಫೀಕ ಜಾಗೀರದಾರ, ಕಾಶಿಬಾಯಿ ಉಳ್ಳಾಗಡ್ಡಿ, ಹೈದರ್‌ಅಲಿ ಇನಾಮದಾರ ಮತ್ತಿತರರು ಇದ್ದರು.



# ಸಾಂಸ್ಕೃತಿಕ ಸಿರಿವಂತಿಕೆ ಪಡೆದ ಭಾರತ ವಿಶ್ವದಲ್ಲೇ ಪ್ರಥಮ ಸ್ಥಾನದಲ್ಲಿದೆ: ರವಿ ದೇಗಾಂವ

ಕಲಬುರಗಿ:ಸಾಂಸ್ಕೃತಿಕ ಸಿರಿವಂತಿಕೆ ಪಡೆದ ಭಾರತದೇಶ ವಿಶ್ವದಲ್ಲಿ ಪ್ರಥಮ ಸ್ಥಾನದಲ್ಲಿದೆ. ಹಿಂದಿನವರಿಂದ ಪರಂಪರಾಗತವಾಗಿ ಬಂದಿರುವ ಹಲವು ಕಲೆಗಳನ್ನು ಮುಂದಿನ ಪೀಳಿಗೆಯವರೆಗೂ ವಿಸ್ತರಿಸುವ ನಿಟ್ಟಿನಲ್ಲಿ ಸರಕಾರ ಇಂತಹ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸುವುದರ ಮೂಲಕ ಹೊಸ ಪ್ರತಿಭೆಗಳಗೆ ಉತ್ತೇಜನ ನೀಡುತ್ತಿದೆ. ಇದು ಕೇವಲ ಮನರಂಜನೆ ಮಾತ್ರ ಸೀಮಿತಗೊಳಿಸದೇ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರ್ನಾಟಕ ನವ ನಿರ್ಮಾಣ ಸೇನೆ ಅಧ್ಯಕ್ಷ ರವಿ ದೇಗಾಂವ ಹೇಳಿದರು.

ಗುರುಬಸವ ನಗರದ ಶಿವಮಂದಿರ ದೇವಸ್ಥಾನ ಆವರಣದಲ್ಲಿ ಜಯ ಭುವನೇಶ್ವರಿ ಸಾಂಸ್ಕೃತಿಕ ಕಲಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಸಾಂಸ್ಕೃತಿಕ ಸೌರಭ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಮುಖ್ಯ ಅತಿಥಿಗಳಾಗಿ ವೀರಯ್ಯಸ್ವಾಮಿ ಬೀದಿಮನಿ, ಕರ್ನಾಟಕ ನವ ನಿರ್ಮಾಣ ಸೇನೆ ಉಪಾಧ್ಯಕ್ಷ ಪ್ರಶಾಂತ ವಿ. ಮಠಪತಿ, ಗುರಣ್ಣ ಚಿಣಮಗೇರಿ, ಅಂಗಣ್ಣ ರೆಡ್ಡಿ, ಅಮೃತರಾವ ಅತನೂರ, ಬಾಬುರಾವ ಸಗರಗುಂಟೆ, ಶರಣಗೌಡ ಪೊಲೀಸ್ ಪಾಟೀಲ ಆಗಮಿಸಿದರು.

ಸಾಂಸ್ಕೃತಿಕ ಸೌರಭ ಸಾಂಸ್ಕೃತಿಕ ಕಾರ್ಯಕ್ರಮಲ್ಲಿ ಕಲಾವಿದರಾದ ಹಣಮಂತರಾವ ಕುಲಕರ್ಣಿ, ಅಣ್ಣಾರಾವ ಶಳ್ಳಗಿ ಮತ್ತಿಮೂಡ, ಸೈದಪ್ಪ ಸಪ್ಪನಗೋಳ ಚೌಡಾಪೂರ, ಪವಿತ್ರಾ ವಿಶ್ವನಾಥ ರಾಜನಾಳ, ಗುರುಶಾಂತಯ್ಯ ಭೂಸನೂರ, ಅನಂದ ಚಿಣಮಗೇರಿ, ರೇವಣಸಿದ್ದ ದೇ.ಕಲ್ಲೂರ, ವೀರಭದ್ರಯ್ಯ ಜಿ.ಎಸ್., ಚೇತನ ಎಸ್.ಬೀದಿಮನಿ ಭಾಗವಹಿಸಿದ್ದರು.

ಸಂಸ್ಥೆ ಕಾರ್ಯಧರ್ಶಿ ಉದಯಕುಮಾರ ಸ್ವಾಗತಿಸಿದರು. ಬಂಡಯ್ಯಸ್ವಾಮಿ ಸುಂಟನೂರ ಕಾರ್ಯಕ್ರಮ ನಿರೂಪಿಸಿದರು. ಅಧ್ಯಕ್ಷರಾದ ವನಿತಾ ಮಠಪತಿ ವಂದಿಸಿದರು.

# ರೌಡಿ ಶೀಟರ್ ಹಡ್ಡಿ ಪಿಂಟ್ಯಾ ಗಡಿಪಾರು



ಕಲಬುರಗಿ:ನಗರದ ಸ್ಟೇಷನ್ ಬಜಾರ್ ಪೊಲೀಸ್ ಠಾಣಾ ವ್ಯಾಪ್ತಿಯ ರೌಡಿ ಶೀಟರ್ ನಿತೀನಕುಮಾರ ಅಲಿಯಾಸ್ ಹಡ್ಡಿ ಪಿಂಟ್ಯಾ ತಂದೆ ದೇವಿದಾಸ ಸೂರ್ಯವಂಶಿ (32) ಯನ್ನು ಬಳ್ಳಾರಿ ಜಿಲ್ಲೆಯ ಕೌಲಬಜಾರ ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು ಮಾಡಲಾಗಿದೆ.

ನಗರದ ಕುವೆಂಪು ನಗರ ನಿವಾಸಿಯಾದ ಈತನ ಮೇಲೆ ವಿವಿಧ ಕಲಂಗಳ ಅಡಿಯಲ್ಲಿ ಒಟ್ಟು 13 ಪ್ರಕರಣಗಳು ದಾಖಲಾಗಿವೆ. ಆರೋಪಿ ರೂಢಿಗತ ಅಪರಾಧಿಯಾಗಿದ್ದು, 2012 ರಿಂದ 2026ರವರೆಗೆ ಭಾರತೀಯ ದಂಡ ಸಂಹಿತೆ/ಭಾರತೀಯ ನ್ಯಾಯ ಸಂಹಿತೆ ಕಾಯ್ದೆ-2023ರ ಅಡಿಯಲ್ಲಿ 7 ಪ್ರಕರಣಗಳು ಮತ್ತು ಭಾರತೀಯ ನಾಗರಿಕ ಸುರಕ್ಷತಾ ಅಡಿಯಲ್ಲಿ 6 ಪ್ರಕರಣಗಳು ದಾಖಲಾಗಿದ್ದು, ಈತನ ವಿರುದ್ಧ ರೌಡಿಶೀಟ್ ಚಾಲ್ತಿಯಲ್ಲಿದೆ.

ಕಲಬುರಗಿ ನಗರದ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯ ಸಾರ್ವಜನಿಕ ಸ್ಥಳಗಳಲ್ಲಿ ಹೊಡೆದಾಟ, ಅಪಾಯಕಾರಿ ವಸ್ತುಗಳಿಂದ ಹಲ್ಲೆ ಮಾಡುವುದು, ಜೀವ ಭಯ ಹಾಕುವುದು, ಕೊಲೆ ಪ್ರಕರಣಗಳಲ್ಲಿ ಭಾಗಿಯಾಗುತ್ತ ಸಾರ್ವಜನಿಕ ಶಾಂತಿ ಮತ್ತು ನೆಮ್ಮದಿಗೆ ಭಂಗವನ್ನುಂಟು ಮಾಡಿ ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವ ವಿವಿಧ ಪ್ರಕರಣಗಳಲ್ಲಿ ಪ್ರಮುಖ ಆರೋಪಿಯಾಗಿದ್ದಾನೆ.ನಗರ ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ಅವರ ನಿರ್ದೇಶನದ ಮೇರೆಗೆ ಆರೋಪಿಯ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಮತ್ತು ಕಾನೂನಿನ ಬಗ್ಗೆ ಸೂಕ್ತ ಗೌರವ ಹೊಂದುವಂತೆ ಮನವರಿಕೆ ಮಾಡಿಕೊಡಲು, ಸಮಾಜದಲ್ಲಿ ಆರೋಗ್ಯಕರ ವಾತಾವರಣ ಕಾಯ್ದುಕೊಳ್ಳುವ ಹಿತ ದೃಷ್ಟಿಯಿಂದ ರೌಡಿಶೀಟರ್ ನಿತೀನಕುಮಾರ ಅಲಿಯಾಸ್ ಹಡ್ಡಿ ಪಿಂಟ್ಯಾನನ್ನು ಗಡಿಪಾರು ಮಾಡುವುದು ಸೂಕ್ತ ಮತ್ತು ಅನಿವಾರ್ಯ ಎಂದು ಸ್ಟೇಷನ್ ಬಜಾರ್ ಪೊಲೀಸ್ ಠಾಣೆ ಪಿಐ ಜಿ. ಎಂ.ಪಾಟೀಲ ಅವರು ವರದಿ ಸಲ್ಲಿಸಿದ ಹಿನ್ನೆಲೆಯಲ್ಲಿ ಡಿಸಿಪಿ ಶಾಲೂ ಹಾಗೂ ವಿಶೇಷ ಕಾರ್ಯನಿರ್ವಾಹಕ ದಂಡಾಧಿಕಾರಿ ನ್ಯಾಯಾಲಯ ವಿಶೇಷ ವಿಚಾರಣೆ ಕೈಗೊಂಡು ರೌಡಿಶೀಟರ್ ನಿತೀನಕುಮಾರ ಅಲಿಯಾಸ್ ಹಡ್ಡಿ ಪಿಂಟ್ಯಾನನ್ನು 1 ವರ್ಷದ ಅವಧಿಗೆ ಬಳ್ಳಾರಿ ಜಿಲ್ಲೆಯ ಕೌಲಬಜಾರ ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು ಆದೇಶ ಮಾಡಿ ಡಿಸಿಪಿ ಶಾಲೂ ಹಾಗೂ ವಿಶೇಷ ಕಾರ್ಯನಿರ್ವಾಹಕ ದಂಡಾಧಿಕಾರಿಯವರ ನ್ಯಾಯಾಲಯ ಆದೇಶ ಹೊರಡಿಸಿದೆ.

# 25 ರಿಂದ ದಾದಾ ಅಲಿಅಬ್ಬಾಸ ಜಾತ್ರೆ



ಕಾಳಗಿ: ತಾಲೂಕಿನ ಗೊಟೂರ ಗ್ರಾಮದಲ್ಲಿ ಹಿಂದೂ ಮುಸ್ಲಿಂ ಭಾವೈಕ್ಯತೆಯ ದಾದಾ ಅಲಿ ಅಬ್ಬಾಸ ಜಾತ್ರಾ ಮಹೋತ್ಸವ ಜೂ 25 ರಿಂದ 27 ರವರೆಗೆ ನಡೆಯಲಿದೆ.

ಜೂ. 25 ರಂದು ಬೆಳಿಗ್ಗೆ 8 ಗಂಟೆಗೆ ಗಂಧ ಹಾಗೂ 26 ರಂದು ದೀಪೊತ್ಸವ 27 ರಂದು ಜಿಯಾರತ್ ಜರುಗಲಿದೆ.

ಗಂಧವು 25 ರಂದು ಮುಂಜಾನೆ 8 ಗಂಟೆಗೆ ಅಬ್ಬಾಸ ಅಲಿ ಮುತ್ಯಾ ರವರ ಮನೆಯಿಂದ ಹೊರಡಲಿದ್ದು ಜಾಮಿಯಾ ಮಸ್ಜಿದ್ ಮುಖಾಂತರ ದರ್ಗಾಕ್ಕೆ ತಲುಪಲಿದೆ. ಮುಂಜಾನೆ 11.35ಕ್ಕೆ ಸಲಾಂ, ದರುದ ಶರೀಫ, ಮುಖಾಂತರ ಗಂಧೋತ್ಸವ ಮಾಡಲಾಗುವುದು. ಎಲ್ಲಾ ಅಲಿ ಅಬ್ಬಾಸ ಮುತ್ಯಾನವರ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಅಲಿ ಅಬ್ಬಾಸ ಮುತ್ಯಾನವರ ಆಶೀರ್ವಾದ ಪಡೆದುಕೊಳ್ಳಲು ಕಮಿಟಿಯಿಂದ ಕೋರಲಾಗಿದೆ.



# ರಾಜಮಾತಾ ಜೀಜಾಬಾಯಿ ಆದರ್ಶ, ವೀರ ಮಹಿಳೆ

ಕಲಬುರಗಿ : ವೀರಮಾತಾ ಜೀಜಾಬಾಯಿ ಅವರು ಮರಾಠ ಸಾಮ್ರಾಜ್ಯದ ಸಂಸ್ಥಾಪಕ ಛತ್ರಪತಿ ಶಿವಾಜಿ ಮಹಾರಾಜರ ತಾಯಿ ಮತ್ತು ಪ್ರಸಿದ್ಧ ಮಾರ್ಗದರ್ಶಕರಾಗಿದ್ದರು. ಮಹಾರಾಷ್ಟ್ರದ ಇತಿಹಾಸದಲ್ಲಿ 'ವೀರಮಾತೆ' ಎಂದು ಅತ್ಯಂತ ಗೌರವಾನ್ವಿತರಾಗಿದ್ದಾರೆ. ಜೀಜಾಬಾಯಿ ಅವರು ಆದರ್ಶ, ವೀರ, ಧೀರ ಮಹಿಳೆಯಾಗಿದ್ದಾರೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಹೇಳಿದರು. ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ "ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ"ಯಲ್ಲಿ " ಬಸವೇಶ್ವರ ಸಮಾಜ ಸೇವಾ ಬಳಗ"ದ ವತಿಯಿಂದ ಜರುಗಿದ "ವೀರಮಾತಾ ಜೀಜಾಬಾಯಿಯವರ 352ನೇ ಪುಣ್ಯಸ್ಮರಣೆ"ಯಲ್ಲಿ ಭಾವಚಿತ್ರಕ್ಕೆ ಪುಷ್ಪ ನಮನಗಳನ್ನು ಸಲ್ಲಿಸಿ ಅವರು ಮಾತನಾಡುತ್ತಿದ್ದರು.

ಜೀಜಾಬಾಯಿ ಅವರು ಜನವರಿ 12, 1598 ರಂದು ಮಹಾರಾಷ್ಟ್ರದ ಸಿಂಧಖೇಡ್ ರಾಜಾದಲ್ಲಿ ಜನಿಸಿದರು. ಇವರ ತಂದೆ ಲಖುಜಿರಾವ್ ಜಾಧವ್ ಮತ್ತು ತಾಯಿ ಮಾಳಸಬಾಯಿ. ಶಹಾಜಿ ಭೋಸ್ಲೆ ಅವರೊಂದಿಗೆ ವಿವಾಹವಾದರು. ಇವರ ಮಗನೇ ಛತ್ರಪತಿ ಶಿವಾಜಿ ಮಹಾರಾಜ.

ಬಾಲ್ಯದಲ್ಲೇ ತಂದೆಯ ಜೊತೆಗೂಡಿ ರಾಜಕೀಯ ಹಾಗೂ ಯುದ್ಧ ವಿದ್ಯೆಗಳನ್ನು ಕಲಿತಿದ್ದರು. ಜೀಜಾಬಾಯಿ ಕೇವಲ ತಾಯಿಯಾಗಿರದೆ, ಶಿವಾಜಿಯವರಿಗೆ ರಾಮಾಯಣ, ಮಹಾಭಾರತದ ಕಥೆಗಳನ್ನು ಹೇಳಿಕೊಟ್ಟು, ದೇಶಭಕ್ತಿ ಮತ್ತು ಧರ್ಮದ ಸಂಸ್ಕಾರವನ್ನು ಬಿತ್ತಿದರು. ಶಿವಾಜಿಯವರಲ್ಲಿ 'ಹಿಂದವಿ ಸ್ವರಾಜ್ಯ'ದ ಕನಸನ್ನು ಸಾಕಾರಗೊಳಿಸಲು ಇವರ ಪ್ರೇರಣೆಯೇ ಮುಖ್ಯವಾಗಿತ್ತು. ಶಿವಾಜಿ ಮಹಾರಾಜರು ಪಟ್ಟಾಭಿಷಿಕ್ತರಾದ ಕೆಲವೇ ದಿನಗಳಲ್ಲಿ, ಅಂದರೆ ಜೂನ್ 17, 1674 ರಂದು ಜೀಜಾಬಾಯಿ ನಿಧನರಾದರು ಎಂದು ಜೀಜಾಬಾಯಿಯವರ ಜೀವನದ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ದತ್ತು ಹಡಪದ, ಶಿವಯೋಗೆಪ್ಪಾ ಎಸ್. ಬಿರಾದಾರ, ಡಾ.ರಾಜಶೇಖರ ಪಾಟೀಲ, ದಿನೇಶ್ ಮಿಶ್ರಾ ಹಾಗೂ ವಿದ್ಯಾರ್ಥಿಗಳು ಇದ್ದರು.

# ಪ್ರಕೃತಿಯ ನಾದವೇ ಸಂಗೀತ, ವ್ಯಕ್ತಿತ್ವ ವಿಕಾಸಕ್ಕೆ ಪ್ರೇರಣೆ: ಪ್ರಭುಶ್ರೀ ತಾಯಿ



ಕಲಬುರಗಿ:ಗರ್ಭಿಣಿಯರು ಸಂಗೀತ ಆಲಿಸಿದರೆ ಮಗುವಿನ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದು ಪೂಜ್ಯ ಪ್ರಭುಶ್ರೀ ತಾಯಿ ಹೇಳಿದರು.

ನಗರದ ಕಲಾಮಂಡಳದಲ್ಲಿ ಜೂನ್ 15 ರಂದು ಸೋಮವಾರ ಪ್ರತಿಭಾ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾಸಂಸ್ಥೆ, ನಂದೂರ (ಕೆ) ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಹಯೋಗದಲ್ಲಿ ಆಯೋಜಿಸಿದ್ದ ಸಂಗೀತ ಸೌರಭ' ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದರು.

ಪ್ರಕೃತಿಯಲ್ಲಿಯೂ ಸಂಗೀತದ ನಾದ ಅಡಕವಾಗಿದ್ದು, ಸಂಗೀತ ಮನುಷ್ಯನಿಗೆ ಮಾನಸಿಕ ಶಾಂತಿ ಯೊಂದಿಗೆ ವ್ಯಕ್ತಿತ್ವಕ್ಕೆ ಪ್ರೇರಣೆ ನೀಡುತ್ತದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗವು ಸಾಹಿತ್ಯ, ಸಂಗೀತ ಹಾಗೂ ಕಲೆಯನ್ನು ಜಗತ್ತಿಗೆ ಪರಿಚಯಿಸಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಅಭಿಪ್ರಾಯಪಟ್ಟರು

ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರಾದ ಡಾ.ಸದಾನಂದ ಪೆರ್ಲ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ,ಸಂಗೀತ ಇರುವೆಡೆ ನೆಮ್ಮದಿ ಇರುತ್ತದೆ. ಸಾಹಿತ್ಯ ಮತ್ತು ಸಂಗೀತವು ಸಮಾಜಕ್ಕೆ ಅಮೂಲ್ಯ ಕೊಡುಗೆಗಳಾಗಿದ್ದು, ಅವು ಮಾನವನ ಬದುಕನ್ನು ಸಮೃದ್ಧಗೊಳಿಸುತ್ತವೆ ಶಾಂತಿ ನೆಮ್ಮದಿಯನ್ನು ನೀಡುತ್ತದೆ ಎಂದರು .

ಸಂಗೀತಗಾರರು ಕೀಳರಿಮೆಯಿಂದ ಹೊರಬಂದು, ಪ್ರಶಸ್ತಿ ಹಾಗೂ ಗೌರವಗಳ ಹಿಂದೆ ಬೀಳದೆ ಸಂಗೀತವನ್ನು ತಪಸ್ಸಿನಂತೆ ಸ್ವೀಕರಿಸಿ ಗುರುಗಳ ಮಾರ್ಗದರ್ಶನದಲ್ಲಿ ಸಂಗೀತ ಕಲಿಯಬೇಕು. ಮೊಬೈಲ್‌ನಂತಹ ಆಧುನಿಕ ಸಾಧನಗಳ ಅವಲಂಬನೆ ಕಡಿಮೆ ಮಾಡಿ ಸಂಗೀತದ ಸಾಧನೆಗೆ ಹೆಚ್ಚು ಒತ್ತು ನೀಡಬೇಕು ಎಂದು ಹೇಳಿದರು.

ಸಂಗೀತಕ್ಕೆ ಜಾತಿ, ಮತ, ಪಂಥ ಹಾಗೂ ಧರ್ಮಗಳ ಬೇಧವಿಲ್ಲ. ವಚನಗಳಿಗೆ ಸಂಗೀತ ಸಂಯೋಜನೆ ಮಾಡುವ ಮೂಲಕ ಸಂಗೀತ ಕ್ಷೇತ್ರಕ್ಕೆ ಸಿದ್ದರಾಮ ಜಂಬಲದಿನ್ನಿ ಅವರ ಕೊಡುಗೆ ಅಪಾರವಾಗಿದೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ವೀರಯ್ಯ ಸ್ವಾಮಿ ಬೀದಿಮನಿ, ಸಿದ್ದಾರಾಮ ಪಾಟೀಲ,ಶಿವರುದ್ರ ಕರಿಕಲ್ಲ್, ಸಂಜೀವ ಕುಮಾರ ಹುಲಸೂರ, ಸಿದ್ದರಾಮರೆಡ್ಡಿ, ಡಾ ಆನಂದ ಪಾಟೀಲ ಸಿದ್ದಾಮಣಿ ವೇದಿಕೆ ಮೇಲೆ ಉಪಸ್ಥಿತರಿದ್ದರು, ಸಂಸ್ಥೆ ಕಾರ್ಯದರ್ಶಿ ನಾಗೇಂದ್ರ ಕಲ್ಲಾ ಪ್ರಾಸ್ತಾವಿಕವಾಗಿ ಮಾತನಾಡಿದರು.

ಅಣ್ಣಾರಾಯ ಶೆಳ್ಳಗಿ, ಮತ್ತಿಮಡು,ಅನೀಲ ಮಠಪತಿ, ಬಸವರಾಜ ಸ್ಥಾವರಮಠ,ಆನಂದ ನಂದಿಕೋಳಮಠ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

ಮೌನೇಶ್ ಪಂಚಾಳ್ ತಬಲಾ ಸಾತ್ ನೀಡಿದರು.

ಸಂಗೀತ ಕಲಾವಿದರಿಗೆ ಗೌರವಿಸಿ ಸನ್ಮಾನಿಸಿದರು, ಡಾ ವೀರಶೆಟ್ಟಿ ಗಾರಂಪಳ್ಳಿ, ಡಾ ಬಸವರಾಜ ಭಾಗಾ, ಸಿ.ಎಸ್. ಮಾಲಿ ಪಾಟೀಲ, ಉಪಸ್ಥಿತರಿದ್ದರು, ಶರಣಗೌಡ ಪಾಟೀಲ ಪಾಳಾ ನಿರೂಪಿಸಿದರು, ಸತೀಶ ಪಾಟೀಲ ವಂದಿಸಿದರು.

# ಸಮಾಜಮುಖಿ ಸಂಘ-ಸಂಸ್ಥೆಗಳು ಹೆಚ್ಚಾಗಲಿ



ಕಲಬುರಗಿ : ಕೇವಲ ಅನುದಾನಕ್ಕಾಗಿ ಸಂಘ-ಸಂಸ್ಥೆಗಳು ಆರಂಭಿಸುವುದು ಒಳ್ಳೆಯ ಬೆಳವಣಿಗೆಯಲ್ಲ. ಯಾವುದೇ ಸಂಸ್ಥೆಯು ನಿರಂತರವಾಗಿ ಸಮಾಜಮುಖಿಯಾಗಿ ಕಾರ್ಯ ನಿರ್ವಹಿಸುವ ನೈಜ ಸಂಘ-ಸಂಸ್ಥೆಗಳು ಹೆಚ್ಚಾಗಬೇಕಾದದ್ದು ಇಂದಿನ ಅಗತ್ಯವಾಗಿದೆ ಎಂದು ಚಿಂತಕ, ಸಾಹಿತಿ ಸುರೇಶ್ ಬಡಿಗೇರ ಮಾರ್ಮಿಕವಾಗಿ ಹೇಳಿದರು.

ನಗರದ ಕನ್ನಡ ಭವನದಲ್ಲಿ ಮಂಗಳವಾರ ಸಂಜೆ ನಿಸರ್ಗ ಗ್ರಾಮೀಣ ಅಭಿವೃದ್ಧಿ ಸೇವಾ ಸಂಸ್ಥೆಯ ಬೆಳ್ಳಿ ಮಹೋತ್ಸವದ ಪ್ರಯುಕ್ತ ಏರ್ಪಡಿಸಿದ್ದ ವಿವಿಧ ಕ್ಷೇತ್ರದ ಸಾಧಕರಿಗೆ "ನಿಸರ್ಗ ರತ್ನ" ಪ್ರಶಸ್ತಿ ಹಾಗೂ ಸಾಧಕ ವಿದ್ಯಾರ್ಥಿಗಳಿಗೆ ಸತ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂಸ್ಥೆಯ ಕಾರ್ಯದರ್ಶಿ ಧೂಳಪ್ಪ ದ್ಯಾಮನಕರ್ ಮಾತನಾಡಿ, ನಮ್ಮ ಸಂಸ್ಥೆಯು ಕಳೆದ 25 ವರ್ಷಗಳಿಂದ ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದೆ. ನಿಸರ್ಗ ಹೆಸರಿನೊಂದಿಗಿರುವ ಈ ಸಂಸ್ಥೆಯು ನಿಸರ್ಗ ಸಂರಕ್ಷಣೆ, ಜನ ಜಾಗೃತಿ ಕಾರ್ಯಕ್ರಮಗಳು, ಕಾನೂನು, ಸಾಮಾಜಿಕ ಸಮಸ್ಯೆಗಳ ಜಾಗೃತಿ ಸೇರಿದಂತೆ ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಸಮಾಜದಲ್ಲಿ ಧನಾತ್ಮಕ ಬದಲಾವಣೆಗಾಗಿ ಶ್ರಮಿಸಲಾಗುತ್ತಿದೆ ಎಂದರು.

ಡಾ.ಸಾರಂಗಧರ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಮುಖಂಡ ಅಭಿಶೇಕ ಅಲ್ಲಮಪ್ರಭು ಪಾಟೀಲ ಉದ್ಘಾಟಿಸಿದರು. ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ವಿ.ಪಸಾರ ಮಾಹಾಗಾಂವ, ಚಿಂತಕ ಡಾ.ಲಕ್ಷ್ಮಣ ಭೋಸ್ಲೆ, ಮುಖಂಡ ಪವನಕುಮಾರ ವಳಕೇರಿ, ಹೋರಾಟಗಾರ ಮಂಜುನಾಥ ನಾಲವಾರಕರ್, ಸಾಹಿತಿ ಡಾ.ರಾಜಶೇಖರ ಮಾಂಗ, ಚಿಂತಕ ಮಸ್ತಾನ್ ಬಿರಾದಾರ, ಸಮಾಜ ಸೇವಕಿ ಮಾಲಾ ಕಣ್ಣಿ ಸೇರಿದಂತೆ ಇನ್ನಿತರರು ವೇದಿಕೆ ಮೇಲಿದ್ದರು. ಕಾರ್ಯಕ್ರಮದಲ್ಲಿ ಅನೇಕರು ಭಾಗವಹಿಸಿದ್ದರು.

ಸಾಧಕರಿಗೆ ನಿಸರ್ಗ ರತ್ನ ಪ್ರಶಸ್ತಿ : ದತ್ತು ಅಗರವಾಲ್, ಎಚ್.ಬಿ.ಪಾಟೀಲ್, ಗಂಗಾಧರ ಸ್ವಾಮಿ, ಉಮಾದೇವಿ ಗುರೋಡೆ, ಶಿವಪುತ್ರ ಉಡಬಾಳಕರ್, ಬಾಬುರಾವ ಕೋಬಾಳಕರ್, ವೈಜನಾಥ ಝುಳಕಿ, ರಾಜಶೇಖರ ಮಾನೆ, ಪ್ರಿಯಾ ಗಡಾಳೆ, ಶ್ರೀನಾಥ ಸಿಂಧೆ, ಸಿದ್ದರಾಮ ರಾಜಮಾನೆ, ಉಷಾ ಆರ್.ಚವ್ಹಾಣ ಸೇರಿದಂತೆ ಇನ್ನಿತರ ಸಾಧಕರಿಗೆ ಪ್ರಶಸ್ತಿ ನೀಡಿ, ಅಭಿನಂದಿಸಲಾಯಿತು.

# ಬಂಜರು ಮತ್ತು ಮರುಭೂಮಿ ಅಭಿವೃದ್ಧಿಪಡಿಸುವುದು ಅಗತ್ಯ



ಕಲಬುರಗಿ : ಅರಣ್ಯೀಕರಣ, ಮಣ್ಣಿನ ಸಂರಕ್ಷಣೆ, ಜಲಾನಯನ ನಿರ್ವಹಣೆ, ವೈಜ್ಞಾನಿಕ ಕೃಷಿ ಪದ್ಧತಿಯ ಅಳವಡಿಕೆ, ಸಮುದಾಯ ಆಧಾರಿತ ಉಪಕ್ರಮಗಳಂತಹ ಮತ್ತಿತರ ಕ್ರಮಗಳನ್ನು ಅನುಸರಿಸುವ ಮೂಲಕ ಬಂಜರು ಮತ್ತುಮರುಭೂಮಿಪ್ರದೇಶಗಳನ್ನುಅಭಿವೃದ್ಧಿಪಡಿಸುವುದು ಅಗತ್ಯವಾಗಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪವಿರುವ ರಿಪಬ್ಲಿಕನ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿಯಲ್ಲಿ ಬಸವೇಶ್ವರ ಸಮಾಜ ಸೇವಾ ಬಳಗದಿಂದ ಜರುಗಿದ 'ವಿಶ್ವ ಬಂಜರು ಮತ್ತು ಮರುಭೂಮಿ ಅಭಿವೃದ್ಧಿ ದಿನಾಚರಣೆ'ಯಲ್ಲಿ ಅವರು ಮಾತನಾಡುತ್ತಿದ್ದರು.

ಅರಣ್ಯೀಕರಣ ಮತ್ತು ಮರಗಳ ನೆಡುವಿಕೆಯು ಬಂಜರು ಭೂಮಿಯನ್ನು ಅರಣ್ಯವಾಗಿ ಪರಿವರ್ತಿಸುವುದು ಹಾಗೂಪರಿಸರವನ್ನು ಸುಧಾರಿಸಲು ಒಂದು ಪ್ರಮುಖ ಮಾರ್ಗವಾಗಿದೆ. ಇದು ಮಣ್ಣಿನ ಸವೆತವನ್ನು ತಡೆದು, ಅದರ ಫಲವತ್ತತೆಯನ್ನು ಹೆಚ್ಚಿಸುತ್ತದೆ ಮತ್ತು ವಾಯು ಗುಣಮಟ್ಟವನ್ನು ಸುಧಾರಿಸುತ್ತದೆ. ಸ್ಥಳೀಯ ಮರಗಳನ್ನು ನೆಟ್ಟು, ಮರಳು ದಿಬ್ಬಗಳನ್ನು ನಿಯಂತ್ರಿಸಬಹುದಾಗಿದೆ. ಜಲಾನಯನ ನಿರ್ವಹಣೆಯು ನೀರನ್ನು ಸಂರಕ್ಷಿಸಲು ಮತ್ತು ಮಣ್ಣಿನ ಸವೆತವನ್ನು ತಡೆಯಲು ಸಹಾಯ ಮಾಡುತ್ತದೆ. ಇದರಲ್ಲಿ ಸ್ಥಳೀಯ ಸಮುದಾಯಗಳ ಭಾಗವಹಿಸುವಿಕೆ ಮತ್ತು ಅರಿವು ಅಭಿವೃದ್ಧಿ ಯೋಜನೆಗಳಲ್ಲಿ ಅತ್ಯಗತ್ಯವಾಗಿದೆ ಎಂದರು.

ಮರುಭೂಮಿ ವಾಸಸ್ಥಾನಗಳನ್ನು ರಕ್ಷಿಸಲು ಮತ್ತು ಸುಸ್ಥಿರ ಅಭ್ಯಾಸಗಳನ್ನು ಅಳವಡಿಸಿಕೊಳ್ಳಲು ಸಮುದಾಯಗಳನ್ನು ಪ್ರೋತ್ಸಾಹಿಸಬೇಕು.

ಜಲಾನಯನ ಪ್ರದೇಶಗಳಲ್ಲಿ ಚೆಕ್ ಡ್ಯಾಂಗಳನ್ನು ನಿರ್ಮಿಸುವುದು, ಮಣ್ಣಿನ ತೇವಾಂಶವನ್ನು ಕಾಪಾಡಲು ನೀರಿನ ಸಂರಕ್ಷಣಾ ಕ್ರಮಗಳನ್ನು ಅಳವಡಿಸುವುದು, ಬರ-ನಿರೋಧಕ ಬೆಳೆಗಳನ್ನು ಬೆಳೆಸುವುದು, ಸ್ಥಳೀಯ ಮರಗಳನ್ನು ನೆಟ್ಟು ಮರುಭೂಮಿ ಹಸಿರೀಕರಣಕ್ಕೆ ಉತ್ತೇಜನ ನೀಡುವುದು, ಸಂಶೋಧನೆ ಮತ್ತು ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಬಂಜರು ಮತ್ತು ಮರಭೂಮಿ ಫಲವತ್ತತೆ ಭೂಮಿಯನ್ನಾಗಿ ಪರಿವರ್ತಿಸಬಹುದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯಸ್ಥ ದತ್ತು ಹಡಪದ, ನಿವೃತ್ತ ಕೃಷಿ ಅಧಿಕಾರಿ ಶಿವಯೋಗೆಪ್ಪಾ ಎಸ್. ಬಿರಾದಾರ, ಸಮಾಜ ಸೇವಕ ಓಂಕಾರ ವಠಾರ, ರಾಜು ಕೊರಳ್ಳಿ ಹಾಗೂ ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.

# ಸಂಕಷ್ಟದಲ್ಲಿರುವ ಕುಟುಂಬಕ್ಕೆ ಡಾ. ಭೀಮಸೇನರಾವ ಶಿಂಧೆ ಸಾಂತ್ವನ



ಔರಾದ್ : ತಾಲೂಕಿನ ಶೆಂಬೆಳ್ಳಿ ಗ್ರಾಮದ ವೈಜಿನಾಥ ಮೇತ್ರೆ ಅವರ ಕುಟುಂಬದಲ್ಲಿ ಸಂಭವಿಸಿದ ದುರ್ಘಟನೆಯ ಹಿನ್ನೆಲೆಯಲ್ಲಿ ಮಂಗಳವಾರ ನಿವೃತ್ತ ಮುಖ್ಯಮಂತ್ರಿಗಳ ಅಪರ ಕಾರ್ಯದರ್ಶಿ ಹಾಗೂ ಕಾಂಗ್ರೆಸ್ ಮುಖಂಡ ಡಾ. ಭೀಮಸೇನರಾವ ಶಿಂಧೆ ಅವರು ಕುಟುಂಬ ಸದಸ್ಯರನ್ನು ಭೇಟಿ ಮಾಡಿ ಸಾಂತ್ವನ ಹೇಳಿದರು.

ಜೀವನೋಪಾಯಕ್ಕಾಗಿ ಹೈದರಾಬಾದನಲ್ಲಿ ನೆಲೆಸಿದ್ದ ವೈಜಿನಾಥ ಮೇತ್ರೆ ಅವರ ಪತ್ನಿ ಇಂದುಮತಿ ಹಾಗೂ ಐವರು ಮಕ್ಕಳು ಮಾವಿನ ಹಣ್ಣು ಸೇವಿಸಿದ ಬಳಿಕ ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿದ್ದರು. ಚಿಕಿತ್ಸೆ ಫಲಕಾರಿಯಾಗದೆ ಪುತ್ರಿಯರಾದ ಭವನೇಶ್ವರಿ ಮತ್ತು ಸುಧಾರಾಣಿ ಮೃತಪಟ್ಟಿದ್ದು, ಉಳಿದ ಮೂವರು ಬಾಲಕಿಯರು ಚೇತರಿಸಿಕೊಂಡಿದ್ದಾರೆ. ಕುಟುಂಬದ ನಿವಾಸಕ್ಕೆ ಭೇಟಿ ನೀಡಿದ ಡಾ. ಶಿಂಧೆ ಅವರು ವೈಯಕ್ತಿಕವಾಗಿ 50 ಸಾವಿರ ಆರ್ಥಿಕ ನೆರವು ನೀಡಿದರು. ಜೊತೆಗೆ ಕುಟುಂಬದ ಯುವತಿಯೊಬ್ಬರಿಗೆ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಉದ್ಯೋಗ ಕಲ್ಪಿಸುವುದಾಗಿ ಹಾಗೂ ಸರ್ಕಾರದ ವತಿಯಿಂದ ಮನೆ ಮಂಜೂರು ಮಾಡಿಸುವುದಾಗಿ ಭರವಸೆ ನೀಡಿದರು. "ಈ ಘಟನೆ ನನಗೆ ತುಂಬಾ ನೋವುಂಟು ಮಾಡಿದೆ. ಇಬ್ಬರು ಮಕ್ಕಳನ್ನು ಕಳೆದುಕೊಂಡಿರುವ ಕುಟುಂಬ ತೀವ್ರ ದುಃಖದಲ್ಲಿದೆ. ಭಗವಂತನು ಕುಟುಂಬದವರಿಗೆ ಈ ನೋವನ್ನು ಸಹಿಸುವ ಶಕ್ತಿ ನೀಡಲಿ. ಯಾವುದೇ ಸಮಸ್ಯೆ ಎದುರಾದರೂ ನನ್ನನ್ನು ಸಂಪರ್ಕಿಸಿ. ನಾನು ಸದಾ ನಿಮ್ಮ ಕುಟುಂಬದೊಂದಿಗೆ ಇರುತ್ತೇನೆ," ಎಂದು ಧೈರ್ಯ ತುಂಬಿದರು. ಈ ಸಂದರ್ಭದಲ್ಲಿ ಸುಭಾಷ್ ನಾಗೂರ, ಚುನ್ನುಮೀಯ್ಯ ಶೆಂಬೆಳ್ಳಿ, ಸೂರ್ಯಕಾಂತ ಮಾಲೆ, ಬಂಡೆಪ್ಪ ಎಂಕೆಮೂರೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ತಿಂಗಳ ವಚನ ಭಜನೆ ಮತ್ತು ಚಿಂತನೆ ಕಾರ್ಯಕ್ರಮ

ಬೀದರ:ನಗರದ ಗುಮ್ಮೆ ಕಾಲೋನಿಯ ಅರಿವಿನ ಮನೆಯಲ್ಲಿ ಅಕ್ಕನಾಗಮ್ಮ ಮಹಿಳಾ ಸಾಂಸ್ಕೃತಿಕ ಸಂಘದ ವತಿಯಿಂದ ತಿಂಗಳ ವಚನ ಭಜನೆ ಮತ್ತು ಚಿಂತನೆ ಕಾರ್ಯಕ್ರಮ ಸೋಮವಾರ ಜರುಗಿತು.

ಪ್ರವಚನಕಾರರಾದ ಭಾರತಿ ಪಾಟೀಲ ರವರು ಕಾರ್ಯಕ್ರಮ ಉದ್ಘಾಟಿಸಿ ಮತ್ತು ಅನುಭಾವ ಮಂಡಿಸುತ್ತಾ 12ನೇ ಶತಮಾನದ ಆಧ್ಯಾತ್ಮಿಕತೆಯ ಮೇರು ವ್ಯಕ್ತಿತ್ವದ ಶರಣೆ ಮುಕ್ತಾಯಕ್ಕ ಅಜಗಣ್ಣನರವರಾಗಿದ್ದು, ಮುಕ್ತಾಯಕ್ಕರ ಅಣ್ಣ ಅಜಗಣ್ಣ ಲಿಂಗೈಕ್ಯವಾದಾಗ, ಅಲ್ಲಮ ಪ್ರಭುದೇವರು ಮುಕ್ತಾಯಕ್ಕನೊಡನೆ ಸಂವಾದ ನಡೆದಾಗ ಭೌತಿಕ ಶರೀರ ತಾತ್ಕಾಲಿಕವಾದುದು, ಶರಣರ ದೃಷ್ಟಿಯಲ್ಲಿ ಅಂತರಂಗದಲ್ಲಿ ಅರಳಿದ ಚೈತನ್ಯದ ಶಕ್ತಿ ಶಾಶ್ವತವಾದದ್ದು. ಅಜಗಣ್ಣ ನಮ್ಮನ್ನು ಅಗಲಿದರೂ ಆ ಮಹಾಶರಣನ ಆಧ್ಯಾತ್ಮಿಕ ಶಕ್ತಿಯು ಜಗತ್ತಿಗೆ ಮಾದರಿಯಾಗಿದೆ. ಅದಕ್ಕೆ ಅಲ್ಲಮರು ಹೇಳುವಂತೆ, ಹೆಣ್ಣು, ಹೊನ್ನು, ಮಣ್ಣು ಮಾಯೆಯ ರೂಪಗಳಾಗಿವೆ. ಆದರೆ ಸುಜ್ಞಾನವೆಂಬುವುದು ಶಾಶ್ವತವಾದ, ಶ್ರೀಮಂತವಾದ ಒಡವೆಯಾಗಿವೆ ಎಂದು ವಿಷಯ ಪ್ರತಿಪಾದಿಸಿದರು.

ಸಾಹಿತಿಗಳಾದ ರೂಪಾ ಪಾಟೀಲ ರವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡುತ್ತಾ, ಜಗತ್ತಿನಲ್ಲಿ ಆರೋಗ್ಯವಂತ ಸಮಾಜವಾಗಬೇಕಾದರೆ ಯೋಗ ಮಹತ್ವವಾದುದು. ಪತಂಜಲಿ ಮಹರ್ಷಿಯವರು ಪ್ರಪ್ರಥಮವಾಗಿ ಯೋಗ ಮತ್ತು ಪ್ರಾಣಾಯಾಮದ ಬಗ್ಗೆ ಸಮಾಜಕ್ಕೆ ಪರಿಚಯ ಮಾಡಿಕೊಟ್ಟ, ಯೋಗ ಮಹರ್ಷಿಗಳಾಗಿರುತ್ತಾರೆ. ಸಮಾಜದಲ್ಲಿ ಜನರು ದೈಹಿಕ, ಮಾನಸಿಕವಾಗಿ ಒತ್ತಡದಿಂದ ಬಳಲುತ್ತಿದ್ದಾರೆ. ಇದಕ್ಕೆ ಯೋಗ, ಪ್ರಾಣಾಯಾಮ ಮತ್ತು ಧ್ಯಾನ ಮಾನವನನ್ನು ಆರೋಗ್ಯವಂತನಾಗಿ ಮಾಡುತ್ತದೆ. ಪ್ರತಿ ದಿವಸ ಒಂದು ಗಂಟೆಯಾದರೂ ಯೋಗ ಮಾಡಿ ದೈಹಿಕ ಮತ್ತು ಮಾನಸಿಕ ರೋಗದಿಂದ ಮುಕ್ತರಾಗಬೇಕೆಂದು ಸಲಹೆ ನೀಡಿದರು. ಅಕ್ಕನಾಗಮ್ಮಾ ಮಹಿಳಾ ಸಾಂಸ್ಕೃತಿಕ ಸಂಘದ ಅಧ್ಯಕ್ಷರಾದ ಲಕ್ಷ್ಮೀಬಾಯಿ ಜಿ. ಬಿರಾದಾರ ರವರು ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಬಸವಾದಿ ಶರಣರ ವಚನಗಳ ಮೌಲ್ಯಗಳು ಸಮಾಜಕ್ಕೆ ದಿವ್ಯ ಔಷದ್ಯಗಳಾಗಿವೆ ಎಂದು ತಿಳಿಸಿದ್ದರು.

# ಡಾ. ವಿರೂಪಾಕ್ಷ ಶಿವಾಚಾರ್ಯರಿಗೆ ಶಿವ ಸಂಸ್ಕೃತಿ ರಕ್ಷಕ ಪುರಸ್ಕಾರ



ಬೀದರ್: ಮಹಾರಾಷ್ಟ್ರದ ಬೀದರ್‌ನ ಶ್ರೀ ಕ್ಷೇತ್ರ ಮನ್ಮಥ ಧಾಮ ಸಂಸ್ಥಾನದ ಡಾ. ವಿರೂಪಾಕ್ಷ ಶಿವಾಚಾರ್ಯರಿಗೆ ಶ್ರೀಮದ್ ಕಾಶಿ ಪೀಠದಿಂದ ಕೊಡಲಾಗುವ ಶಿವ ಸಂಸ್ಕೃತಿ ರಕ್ಷಕ ಪುರಸ್ಕಾರ ದೊರೆತಿದೆ.

ನಾಲ್ಕು ದಶಕಗಳ ಸಮಾಜೋ ಧಾರ್ಮಿಕ ಕಾರ್ಯಗಳಿಗಾಗಿ ಅವರಿಗೆ ಪುರಸ್ಕಾರ ಸಂದಿದೆ.

ಸೋಲಾಪುರದಲ್ಲಿ ಭಾನುವಾರ ನಡೆದ ಸಮಾರಂಭದಲ್ಲಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಡಾ. ವಿರೂಪಾಕ್ಷ ಶಿವಾಚಾರ್ಯರಿಗೆ ಪ್ರಶಸ್ತಿ ಲಭಿಸಿರುವುದಕ್ಕೆ ಭಾಲ್ಕಿಯ ಭಾಗ್ಯಶ್ರೀ ಸೋಮಶಂಕರ ಹಿರೇಮಠ, ಅಚ್ಚು ಚನ್ನವೀರ ಸ್ವಾಮಿ ಹಾಗೂ ಅಮು ಚನ್ನವೀರ ಸ್ವಾಮಿ ಸಂತಸ ವ್ಯಕ್ತಪಡಿಸಿದ್ದಾರೆ.



# ಜನ್ಮದಿನಕ್ಕೆ ಸಸಿ ಉಡುಗೊರೆ ನೀಡಿ

ಬೀದರ್: ಪರಿಸರ ಸಂರಕ್ಷಣೆಗೆ ಜನ್ಮದಿನ, ಸಭೆ–ಸಮಾರಂಭಗಳಲ್ಲಿ ಸಸಿ ಉಡುಗೊರೆಯಾಗಿ ನೀಡುವ ಪರಿಪಾಠ ಬೆಳೆಯಬೇಕು ಎಂದು ಪ್ರಾಚಾರ್ಯ ಗೋವಿಂದ ಡಿ. ತಾಂದಳೆ ಹೇಳಿದರು.

ಇಲ್ಲಿಯ ಸಪ್ತಗಿರಿ ಪದವಿಪೂರ್ವ ಕಾಲೇಜಿನಲ್ಲಿ ಪರಿಸರ ದಿನಾಚರಣೆ ನಿಮಿತ್ತ ಆಯೋಜಿಸಿದ್ದ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿಸರ್ಗ ಮನುಷ್ಯನಿಗೆ ನೆಮ್ಮದಿಯಿಂದ ಬದುಕಲು ಎಲ್ಲವನ್ನೂ ಕೊಟ್ಟಿದೆ. ಪ್ರತಿಯೊಬ್ಬರೂ ಸಸಿ ನೆಟ್ಟು ಪರಿಸರ ರಕ್ಷಿಸಬೇಕಾಗಿದೆ ಎಂದು ತಿಳಿಸಿದರು.

ಪರಿಸರ ಚೆನ್ನಾಗಿದ್ದರೆ ಮಾತ್ರ ಮನುಷ್ಯನಿಗೆ ಉಳಿಗಾಲ ಇದೆ. ಹೀಗಾಗಿ ಪರಿಸರದ ಮಹತ್ವವನ್ನು ಎಲ್ಲರೂ ಅರಿಯಬೇಕು ಎಂದು ವೆಂಕಟೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಶ್ರೀನಿವಾಸ್ ಡಿ. ತಾಂದಳೆ ಹೇಳಿದರು.ಪರಿಸರ ಕಾಳಜಿ ಪರಿಸರ ದಿನಾಚರಣೆಗೆ ಸೀಮಿತವಾಗಬಾರದು. ಪರಿಸರ ಜಾಗೃತಿ ಕಾರ್ಯಕ್ರಮಗಳು ನಿರಂತರ ನಡೆಯಬೇಕು ಎಂದು ಸಂಸ್ಥೆಯ ಕಾರ್ಯದರ್ಶಿ ಗೋಪಾಲ್ ಡಿ. ತಾಂದಳೆ ಅಭಿಪ್ರಾಯಪಟ್ಟರು.

ಹವಾಮಾನ ಬದಲಾವಣೆ, ಜಾಗತಿಕ ತಾಪಮಾನ ಹೆಚ್ಚಳಕ್ಕೆ ಅರಣ್ಯ ನಾಶವೇ ಕಾರಣವಾಗಿದೆ. ಪರಿಸರದ ಸಮತೋಲನ ಕಾಯ್ದುಕೊಳ್ಳಲು ಸಸಿಗಳನ್ನು ಬೆಳೆಸುವುದು ಬಹಳ ಅವಶ್ಯಕವಾಗಿದೆ ಎಂದು ಜೀವಶಾಸ್ತ್ರ ಉಪನ್ಯಾಸಕ ಅನಿಲಕುಮಾರ ಜಾಧವ್ ಹೇಳಿದರು.

ಉಪನ್ಯಾಸಕ ಸಾಗರ್ ಮಾತನಾಡಿದರು. ಕಾಲೇಜು ಆವರಣದಲ್ಲಿ ಸಸಿ ನೆಟ್ಟು, ಸ್ವಚ್ಛತಾ ಅಭಿಯಾನ ನಡೆಸಲಾಯಿತು.

ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.




# ಸಂವಿಧಾನವೇ ದೇಶದ ಧರ್ಮಗ್ರಂಥ : ಎಸ್.ಬಿ. ಕುಚಬಾಳ

ಬೀದರ : ಡಾ. ಬಾಬಾಸಾಹೇಬ ಅಂಬೇಡ್ಕರ್ ರಚಿಸಿದ ಸಂವಿಧಾನವೇ ದೇಶದ ನಿಜವಾದ ಧರ್ಮಗ್ರಂಥವಾಗಿದ್ದು, ಅದು ಭಾರತೀಯರ ರಕ್ಷಾ ಕವಚವಾಗಿದೆ ಎಂದು ನಿವೃತ್ತ ಶಿಕ್ಷಣಾಧಿಕಾರಿ ಎಸ್.ಬಿ. ಕುಚಬಾಳ ಅಭಿಪ್ರಾಯಪಟ್ಟರು.

ನಗರದ ಡಾ. ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಭೀಮರಾಜ ಸಾಹಿತ್ಯ ಪರಿಷತ್, ಬೀದರ ವತಿಯಿಂದ ಮಂಗಳವಾರ ಆಯೋಜಿಸಲಾದ ಬುದ್ಧ, ಬಸವ, ಅಂಬೇಡ್ಕರ ಸಾಂಸ್ಕೃತಿಕ ಉತ್ಸವ ಹಾಗೂ ಸಂವಿಧಾನ ಕುರಿತ ವಿಚಾರ ಸಂಕಿರಣ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದಲ್ಲಿ ವಿವಿಧ ಜಾತಿ, ಧರ್ಮಗಳ ಜನರು ವಾಸಿಸುತ್ತಿದ್ದು, ಪ್ರತಿಯೊಬ್ಬರಿಗೂ ತಮ್ಮದೇ ಆದ ಧರ್ಮಗ್ರಂಥಗಳಿವೆ. ಆದರೆ ದೇಶದ ಎಲ್ಲ ನಾಗರಿಕರನ್ನು ಸಮಾನವಾಗಿ ಕಾಣುವ ಸಂವಿಧಾನವೇ ಭಾರತದ ಧರ್ಮಗ್ರಂಥವಾಗಿದೆ. ಇದು ಪ್ರತಿಯೊಬ್ಬ ಭಾರತೀಯನ ಹಕ್ಕುಗಳನ್ನು ಕಾಪಾಡುವ ರಕ್ಷಾ ಕವಚವಾಗಿದ್ದು, ಸಮಾನತೆ ಹಾಗೂ ನ್ಯಾಯವನ್ನು ಒದಗಿಸುತ್ತದೆ ಎಂದು ಹೇಳಿದರು.

ಸಂವಿಧಾನವು ಸರ್ವರ ಹಿತವನ್ನು ಕಾಪಾಡುವುದರ ಜೊತೆಗೆ ಸಮಾನ ಅವಕಾಶಗಳನ್ನು ನೀಡುವ ಮೂಲಕ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ದಾರಿಯಾಗುತ್ತದೆ ಎಂದು ಅವರು ತಿಳಿಸಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಸಮಾಜದ ಮುಖಂಡ ಶಂಕರರಾವ ದೊಡ್ಡಿ ಮಾತನಾಡಿ, ಸಂವಿಧಾನವು ಕೇವಲ ದಲಿತ ಸಮುದಾಯಕ್ಕೆ ಸೀಮಿತವಾಗಿಲ್ಲ. ಅದು ಎಲ್ಲ ಧರ್ಮ, ಜಾತಿ ಹಾಗೂ ವರ್ಗಗಳ ಜನರಿಗೆ ನ್ಯಾಯ ಮತ್ತು ಸಮಾನ ಹಕ್ಕುಗಳನ್ನು ಒದಗಿಸಿದೆ ಎಂದು ಹೇಳಿದರು.

ಇನ್ನೋರ್ವ ಮುಖ್ಯ ಅತಿಥಿ ಸಂದೀಪ್ ಕಾಂಟೆ ಮಾತನಾಡಿ, ಇಂದಿನ ಪರಿಸ್ಥಿತಿಯಲ್ಲಿ ಸಂವಿಧಾನವೇ ನಮ್ಮ ಉಸಿರಾಗಿದ್ದು, ಅದರ ಮೌಲ್ಯಗಳನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಸಮಾಜ ಸೇವಕ ಸುರೇಶ್ ಜೋಜನಾಕರ್ ಮಾತನಾಡಿ, ಎಲ್ಲರ ಹಿತ ಕಾಪಾಡುತ್ತಿರುವ ಸಂವಿಧಾನವನ್ನು ಕೆಲವರು ಬದಲಾಯಿಸಲು ಯತ್ನಿಸುತ್ತಿದ್ದಾರೆ. ಆದರೆ ಅಂತಹ ಪ್ರಯತ್ನಗಳು ಯಶಸ್ವಿಯಾಗುವುದಿಲ್ಲ ಎಂದು ಹೇಳಿದರು.

ಕಾರ್ಯಕ್ರಮದ ಸಾನಿಧ್ಯವನ್ನು ಕಲಬುರಗಿಯ ಅಮ್ರಪಾಲಿ ಬುದ್ಧ ವಿಹಾರದ ಪೂಜ್ಯ ಭಂತೆ ಧಮ್ಮಜ್ಯೋತಿ ವಹಿಸಿದ್ದರು. ಭೀಮರಾಜ ಸಾಹಿತ್ಯ ಪರಿಷತ್ ಅಧ್ಯಕ್ಷ ತಾತ್ಯಾರಾವ ಕೆ. ಮಾರ್ಥಂಡ್ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆಯಲ್ಲಿ ಡಿ.ಎಸ್.ಎಸ್. ಅಧ್ಯಕ್ಷ ಅರುಣ ಪಟೇಲ್, ಶಕ್ತಿ ಕನ್ನಡ ದಿನಪತ್ರಿಕೆಯ ಸಂಪಾದಕ ಶಕ್ತಿಕಾಂತ ಬಾವಿದೊಡ್ಡಿ, ನಿವೃತ್ತ ಪ್ರಾಂಶುಪಾಲ ಎಂ.ಡಿ. ನಿಝಾಮ್, ಆಲ್ ಇಂಡಿಯಾ ಬುದ್ಧಿಷ್ಟ ಎಜ್ಯುಕೇಶನ್ ಸೊಸೈಟಿ ಅಧ್ಯಕ್ಷ ಪ್ರಸನ್ನ ಡಾಂಗೆ ಹಾಗೂ ಹಿರಿಯ ಸಮಾಜ ಸೇವಕ ಸುಧಾಕರ ಎಕಂಬೇಕರ್ ಉಪಸ್ಥಿತರಿದ್ದರು.

ನಿವೃತ್ತ ಗ್ರಂಥಪಾಲಕ ಬಸವರಾಜ ದಾಂಡೇಕರ್ ಕಾರ್ಯಕ್ರಮ ನಿರ್ವಹಿಸಿದರು. ಬಳಿಕ ವಿವಿಧ ಕಲಾ ತಂಡಗಳಿಂದ ಸಾಂಸ್ಕೃತಿಕ ಉತ್ಸವ ಜರುಗಿತು. 15ಕ್ಕೂ ಹೆಚ್ಚು ಕಲಾ ತಂಡಗಳು ಭಾಗವಹಿಸಿ ಹಾಡು, ತತ್ವಪದ, ಕೋಲಾಟ ಹಾಗೂ ಜಾನಪದ ಗೀತೆಗಳ ಮೂಲಕ ಪ್ರೇಕ್ಷಕರ ಮನಗೆದ್ದವು.



# ಸಂಗೀತದಿಂದ ಮಾನಸಿಕ ಒತ್ತಡ ಕಡಿಮೆ : ಸಾಗರ ಪಾಟೀಲ

ಔರಾದ:ಸಂಗೀತವು ಮಾನವನ ಜೀವನದಲ್ಲಿ ವಿಶೇಷ ಸ್ಥಾನ ಹೊಂದಿದ್ದು, ಮನಸ್ಸನ್ನು ಅರಳಿಸುವ ಅಪಾರ ಶಕ್ತಿಯನ್ನು ಒಳಗೊಂಡಿದೆ. ಸಂಗೀತ ಕೇಳುವುದರಿಂದ ಮಾನಸಿಕ ಒತ್ತಡ ಕಡಿಮೆಯಾಗುವುದಲ್ಲದೆ, ನೆಮ್ಮದಿ ಹಾಗೂ ಸಂತೋಷದ ಭಾವನೆ ಮೂಡುತ್ತದೆ ಎಂದು ಯುವ ಮುಖಂಡ ಸಾಗರ ಪಾಟೀಲ ಹೇಳಿದರು.

ತಾಲೂಕಿನ ಬೆಲ್ದಾಳ ಗ್ರಾಮದಲ್ಲಿ ಡಾ.ಪಂಡಿತ ಪುಟ್ಟರಾಜ ಸಂಗೀತ ಸಾಹಿತ್ಯ ನಾಟ್ಯ ಮತ್ತು ಚಾರಿಟೇಬಲ್ ಟ್ರಸ್ಟ್ ಬೆಲ್ದಾಳ ಹಾಗೂ ಕನ್ನಡ ಮತ್ತು ಸಂಸ್ಕೃತಿಬೆಂಗಳೂರವತಿಯಿಂದಆಯೋಜಿಸಲಾಗಿದ್ದ ಸಂಗೀತ ಸಾಂಸ್ಕೃತೀಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಇತ್ತೀಚಿನ ದಿನಗಳಲ್ಲಿ ವೇಗದ ಜೀವನಶೈಲಿಯಿಂದ ಜನರು ಒತ್ತಡಕ್ಕೆ ಒಳಗಾಗುತ್ತಿರುವ ಸಂದರ್ಭಗಳಲ್ಲಿ ಸಂಗೀತವು ಉತ್ತಮ ಔಷಧಿಯಂತೆ ಕಾರ್ಯನಿರ್ವಹಿಸುತ್ತಿದೆ. ಶಾಸ್ತ್ರೀಯ ಸಂಗೀತ, ಭಾವಗೀತೆ, ಭಕ್ತಿಗೀತೆ ಹಾಗೂ ಜನಪದ ಸಂಗೀತಗಳು ಮನಸ್ಸಿಗೆ ಹೊಸ ಚೈತನ್ಯ ನೀಡುತ್ತವೆ. "ಸಂಗೀತವು ಕೇವಲ ಮನರಂಜನೆಯ ಸಾಧನವಲ್ಲ, ಅದು ಮನಸ್ಸು ಮತ್ತು ಹೃದಯವನ್ನು ಸಂಪರ್ಕಿಸುವ ಮಾಧ್ಯಮವಾಗಿದೆ" ಎಂದು ತಿಳಿಸಿದರು.

# ಬೇಡಿಕೆ ಈಡೇರಿಸದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ



ಬೀದರ: ಕರ್ನಾಟಕ ರಾಜ್ಯದಲ್ಲಿ ವಿದ್ಯುಚ್ಛಕ್ತಿ ವಿತರಣಾ ಕ್ಷೇತ್ರವನ್ನು ಖಾಸಗೀಕರಣಗೊಳಿಸದೆ, ಸರ್ಕಾರದ ಅಧೀನದಲ್ಲಿಯೇ ಯಥಾಸ್ಥಿತಿಯಲ್ಲಿ ಮುಂದುವರಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಬೀದರ ಜಿಲ್ಲಾ ಘಟಕದಿಂದ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಮನವಿ ಸಲ್ಲಿಸಿದ್ದಾರೆ.

ರಾಜ್ಯದ ಎಲ್ಲಾ ವಿದ್ಯುತ್ ವಿತರಣಾ ಕಂಪನಿಗಳು ಈಗಾಗಲೇ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕರು, ರೈತರು ಹಾಗೂ ಕೈಗಾರಿಕೋದ್ಯಮಿಗಳಿಗೆ ಸಮರ್ಪಕ ಸೇವೆ ಒದಗಿಸುತ್ತಿವೆ ಎಂದು ತಿಳಿಸಲಾಗಿದೆ. ಸರ್ಕಾರದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿದ್ಯುತ್ ವಿತರಣಾ ಕಂಪನಿಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಇಂತಹ ಸಂದರ್ಭದಲ್ಲಿ ಖಾಸಗಿ ಕಂಪನಿಗಳಿಗೆ ವಿದ್ಯುತ್ ವಿತರಣಾ ಕ್ಷೇತ್ರದಲ್ಲಿ ಅವಕಾಶ ನೀಡಿದರೆ ಸರ್ಕಾರದ ನೇರ ನಿಯಂತ್ರಣ ಕಡಿಮೆಯಾಗಲಿದ್ದು, ಸಾರ್ವಜನಿಕರು, ರೈತರು ಹಾಗೂ ಕೈಗಾರಿಕೆಗಳಿಗೆ ಅನ್ಯಾಯವಾಗುವ ಸಾಧ್ಯತೆ ಇದೆ ಎಂದು ಸಂಘ ಆತಂಕ ವ್ಯಕ್ತಪಡಿಸಿದ್ದಾರೆ.

ಟಾಟಾ ಪವರ್ ಕಂಪನಿಯವರು ಸಲ್ಲಿಸಿರುವ ಅರ್ಜಿಯನ್ನು ವಿದ್ಯುಚ್ಛಕ್ತಿ ಕಾಯ್ದೆ–2003ರ ಸೆಕ್ಷನ್ 108ರ ಅನ್ವಯ ತಿರಸ್ಕರಿಸಿ, ರಾಜ್ಯದ ವಿದ್ಯುತ್ ವಿತರಣಾ ವ್ಯವಸ್ಥೆಯನ್ನು ಸರ್ಕಾರದ ಅಧೀನದಲ್ಲಿಯೇ ಮುಂದುವರಿಸುವಂತೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಬೇಡಿಕೆಗಳನ್ನು ಸರ್ಕಾರ ಪರಿಗಣಿಸದಿದ್ದಲ್ಲಿ ಜಿಲ್ಲೆಯಾದ್ಯಂತ ಬೀದಿಗಿಳಿದು ಉಗ್ರ ಹೋರಾಟ ನಡೆಸಲಾಗುವುದು. ಯಾವುದೇ ಅಹಿತಕರ ಘಟನೆಗಳಿಗೆ ಸರ್ಕಾರವೇ ಹೊಣೆಯಾಗಲಿದೆ ಎಂದು ಸಂಘದ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾ ಗೌರವಾಧ್ಯಕ್ಷ ಸಿದ್ರಾಮಪ್ಪಾ ಆಣದೂರೆ, ಜಿಲ್ಲಾಧ್ಯಕ್ಷ ಶ್ರೀಮಂತ ಬಿರಾದಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಯಾನಂದ ಸ್ವಾಮಿ ಸಿರ್ಸಿ, ರಾಜ್ಯ ಕಾರ್ಯದರ್ಶಿ (ಮಹಿಳಾ ಘಟಕ) ಶೋಭಾವತಿ ಕಾರಭಾರಿ, ರಾಜ್ಯ ಪ್ರತಿನಿಧಿ ಶೇಷರಾವ ಕಣಜಿ, ರಾಜ್ಯ ಉಪಾಧ್ಯಕ್ಷ ಚಂದ್ರಶೇಖರ ಜಮಖಂಡೆ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಮಹಾನಂದಾ ದೇಶಮುಖ, ಜಿಲ್ಲಾ ಉಪಾಧ್ಯಕ್ಷರಾದ ಶಂಕರೆಪ್ಪಾ ಪಾರಾ ಹಾಗೂ ಸಿದ್ದಣ್ಣಾ ಭೂಶೆಟ್ಟಿ, ಭಾಲ್ಕಿ ತಾಲ್ಲೂಕು ಅಧ್ಯಕ್ಷ ಬಾಬುರಾವ ಜೋಳದಾಬಕಾ, ಕಮಲನಗರ ಅಧ್ಯಕ್ಷ ಪ್ರವೀಣ ಕುಲಕರ್ಣಿ, ಬಸವಕಲ್ಯಾಣ ಅಧ್ಯಕ್ಷ ಸುಭಾಷ ರಗಟೆ, ಬೀದರ ಅಧ್ಯಕ್ಷ ನಾಗಯ್ಯ ಸ್ವಾಮಿ, ಔರಾದ ಅಧ್ಯಕ್ಷ ಪ್ರಕಾಶ ಬಾವಗೆ, ಹುಮನಾಬಾದ ಅಧ್ಯಕ್ಷ ಸತೀಶ ನನ್ನೂರೆ, ಔರಾದ ಮಹಿಳಾ ಘಟಕದ ಅಧ್ಯಕ್ಷೆ ಭಾಗ್ಯಶ್ರೀ ದೇಶಮುಖ, ಭಾಲ್ಕಿ ಮಹಿಳಾ ಘಟಕದ ಅಧ್ಯಕ್ಷೆ ಸುವರ್ಣ ಬಳತೆ ಹಾಗೂ ಭಾಲ್ಕಿ ಮಹಿಳಾ ಘಟಕದ ಕಾರ್ಯಾಧ್ಯಕ್ಷೆ ವನಿತಾ ಮಾಶೆಟ್ಟೆ ಸೇರಿದಂತೆ ಹಲವು ಪದಾಧಿಕಾರಿಗಳು ಉಪಸ್ಥಿತರಿದದರು.

# ದುರ್ಘಟನೆಗೆ ಒಳಗಾದ ಕುಟುಂಬಕ್ಕೆ ಶಾಸಕ ಪ್ರಭು ಚವ್ಹಾಣ ಅಭಯ ಉಳಿದ ಮಕ್ಕಳ ಶಿಕ್ಷಣ, ಭವಿಷ್ಯದ ಜವಾಬ್ದಾರಿ ವಹಿಸಿಕೊಳ್ಳುವ ಭರವಸೆ



ಔರಾದ್ : ತಾಲೂಕಿನ ಶೆಂಬೆಳ್ಳಿ ಗ್ರಾಮದ ವೈಜಿನಾಥ ಮೇತ್ರೆ ಅವರ ಕುಟುಂಬದಲ್ಲಿ ಸಂಭವಿಸಿದ ದುರ್ಘಟನೆಯ ಹಿನ್ನೆಲೆಯಲ್ಲಿ ಶಾಸಕ ಪ್ರಭು ಬಿ.ಚವ್ಹಾಣ ಅವರು ಜೂನ್ ಮಂಗಳವಾರ ಕುಟುಂಬದ ಸದಸ್ಯರಿಗೆ ಭೇಟಿ ನೀಡಿ ಸಾಂತ್ವನ ಹೇಳಿದರು.

ಈ ಕುಟುಂಬವು ಜೀವನೋಪಾಯಕ್ಕಾಗಿ ಕಳೆದ 8–10 ವರ್ಷಗಳಿಂದ ಹೈದರಾಬಾದನಲ್ಲಿ ನೆಲೆಸಿದೆ. ವೈಜಿನಾಥ ಮೇತ್ರೆ ಅವರ ಪತ್ನಿ ಹಾಗೂ ಐವರು ಮಕ್ಕಳು ಮಾವಿನ ಹಣ್ಣು ಸೇವಿಸಿದ ಬಳಿಕ ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿದ್ದರು. ಅವರಲ್ಲಿ ಪುತ್ರಿಯರಾದ ಭವನೇಶ್ವರಿ ಮತ್ತು ಸುಧಾರಾಣಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದು, ಉಳಿದ ಮೂವರು ಬಾಲಕಿಯರು ಚೇತರಿಸಿಕೊಂಡಿದ್ದಾರೆ.

ದುಃಖಿತ ಕುಟುಂಬದ ಮನೆಗೆ ಭೇಟಿ ನೀಡಿದ ಶಾಸಕ ಪ್ರಭು ಚವ್ಹಾಣ ಅವರು ಕುಟುಂಬದ ಎಲ್ಲ ಸದಸ್ಯರೊಂದಿಗೆ ಮಾತನಾಡಿ, ಘಟನೆಯ ಬಗ್ಗೆ ವಿವರಣೆ ಪಡೆದರು. ಮನೆಯವರು ಮುಕ್ತವಾಗಿ ಮಾಹಿತಿಯನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ಶಾಸಕರು ಕುಟುಂಬಸ್ಥರಿಗೆ ಆಸ್ಪತ್ರೆಯ ಖರ್ಚು ವೆಚ್ಚ ಮತ್ತು ಕುಟುಂಬ ನಿರ್ವಹಣೆಗೆ ವೈಯಕ್ತಿಕ ಧನಸಹಾಯ ನೀಡಿದರು. ಉಳಿದ ಮೂವರು ಬಾಲಕಿಯರ ಶಿಕ್ಷಣ, ಮದುವೆ ಹಾಗೂ ಇತರೆ ಅಗತ್ಯಗಳ ಜವಾಬ್ದಾರಿಯನ್ನು ವಹಿಸಿಕೊಂಡು ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ನಂತರ ಮಾತನಾಡಿದ ಅವರು, "ಈ ಘಟನೆ ತಿಳಿದು ನನಗೆ ತುಂಬಾ ನೋವಾಗಿದೆ. ಬಾಲಕಿಯರ ತಾಯಿಯ ಆರೋಗ್ಯವು ಚನ್ನಾಗಿರುತ್ತಿಲ್ಲವೆಂದು ಗೊತ್ತಾಗಿದೆ. ಇಬ್ಬರು ಮಕ್ಕಳನ್ನು ಕಳೆದುಕೊಂಡಿರುವ ಈ ಕುಟುಂಬ ತೀವ್ರ ದುಃಖದಲ್ಲಿದೆ. ಭಗವಂತನು ಕುಟುಂಬಸ್ಥರಿಗೆ ಈ ದುಃಖವನ್ನು ಸಹಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ. ನಾನು ಸದಾ ನಿಮ್ಮ ಕುಟುಂಬದೊಂದಿಗೆ ಇರುತ್ತೇನೆ. ಯಾವುದೇ ಕಾರಣಕ್ಕೂ ಹೆದರಬೇಡಿ," ಎಂದು ಧೈರ್ಯ ತುಂಬಿದರು. ತೀವ್ರ ಅಸ್ವಸ್ಥಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಬಾಲಕಿಯ ಆರೋಗ್ಯದ ಕುರಿತು ವೈದ್ಯರಿಂದ ಮಾಹಿತಿ ಪಡೆದಿದ್ದೇನೆ. ಅಗತ್ಯ ಚಿಕಿತ್ಸೆಯನ್ನು ಸಮರ್ಪಕವಾಗಿ ನೀಡುವಂತೆ ಸೂಚಿಸಿದ್ದೇನೆ. ಕುಟುಂಬದ ಸದಸ್ಯರೊಂದಿಗೆ ದೂರವಾಣಿ ಮೂಲಕವೂ ಮಾತನಾಡಿ ಧೈರ್ಯ ತುಂಬುವ ಕೆಲಸ ಮಾಡಿದ್ದೇನೆ. ಮುಂದೆಯೂ ಉಳಿದ ಮಕ್ಕಳನ್ನು ವೈಯಕ್ತಿಕವಾಗಿ ದತ್ತು ಸ್ವರೂಪದಲ್ಲಿ ನೋಡಿಕೊಳ್ಳುತ್ತೇನೆ. ಅವರ ಶಿಕ್ಷಣ, ಮದುವೆ ಸೇರಿದಂತೆ ಎಲ್ಲ ಅಗತ್ಯ ಕಾರ್ಯಗಳಿಗೆ ನೆರವಾಗುತ್ತೇನೆ. ಹೈದರಾಬಾದನಲ್ಲಿ ವಾಸವಾಗಿದ್ದ ಕಾರಣ ಕುಟುಂಬಕ್ಕೆ ಸ್ವಂತ ಮನೆ ಇಲ್ಲ ಎಂಬ ಮಾಹಿತಿ ದೊರೆತಿದ್ದು, ಅವರಿಗೆ ಸರ್ಕಾರದಿಂದ ಮನೆ ನಿರ್ಮಿಸಿಕೊಡಲು ಕ್ರಮ ವಹಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಶಿವಾಜಿರಾವ ಪಾಟೀಲ ಮುಂಗನಾಳ, ಧೊಂಡಿಬಾ ನರೋಟೆ, ರಾಮಶೆಟ್ಟಿ ಪನ್ನಾಳೆ, ಪ್ರಕಾಶ ಜೀರ್ಗೆ, ಸಚಿನ ರಾಠೋಡ, ಉದಯ ಸೋಲಾಪುರೆ, ಮಂಜು ಸ್ವಾಮಿ, ನಾಗಶೆಟ್ಟಿ ಗಾದಗೆ, ಬೀರಪ್ಪ ರಕ್ಕ್ಯಾಳ, ಅಶೋಕ ಶೆಂಬೆಳ್ಳಿ, ಸಂಗಗೊಂಡ ಮೇತ್ರೆ, ಕಿರಣ ಪಾಟೀಲ, ಹಾವಗಿರಾವ ಶರಣ, ಸಚಿನ ಕಾಂಬಳೆ ಸೇರಿದಂತೆ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕಲೆ ಅನಾವರಣಕ್ಕೆ ವೇದಿಕೆಯಾದ ಜನಪದ ಸಂಭ್ರಮ



ಬೀದರ್: ಅಹಿಲ್ಯಾಬಾಯಿ ಹೋಳ್ಕರ ಸಾಂಸ್ಕೃತಿಕ ಮಹಿಳಾ ಸಂಘವು ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಇಲ್ಲಿಯ ಕುಂಬಾರವಾಡ ರಸ್ತೆಯಲ್ಲಿ ಇರುವ ಕರುನಾಡ ಸಾಂಸ್ಕತಿಕ ಭವನದಲ್ಲಿ ಈಚೆಗೆ ಹಮ್ಮಿಕೊಂಡಿದ್ದ ಜಾನಪದ ಸಂಭ್ರಮ ಕಾರ್ಯಕ್ರಮವು ಜಾನಪದದ ವಿವಿಧ ಕಲೆಗಳ ಅನಾವರಣಕ್ಕೆ ವೇದಿಕೆಯಾಯಿತು. ಕಲಾವಿದರು ತಮ್ಮ ಕಲೆಗಳನ್ನು ಪ್ರದರ್ಶಿಸಿ ಸಭಿಕರ ಮೆಚ್ಚುಗೆಗೆ ಪಾತ್ರರಾದರು.

ಕಲಾವಿದ ಮಲ್ಲಿಕಾರ್ಜುನ ರಾಂಪುರೆ ವಚನ ಗಾಯನ, ಕರಬಸಪ್ಪ ವಿಶ್ವಕರ್ಮ ದಾಸರ ಪದ, ಮನೋಹರ ಹುಪಳಾ, ಮಲ್ಲಿಕಾರ್ಜುನ ಪಾಟೀಲ, ಅಂಜಲಿ, ಕೃಷ್ಣರಾಜ ಜಾನಪದ ಗೀತೆ, ಜಗದೇವಿ ವಡಗಾಂವ್ ಭಕ್ತಿ ಗೀತೆ, ಸಿದ್ರಾಮಯ್ಯ ಸ್ವಾಮಿ ಭಜನೆ ಪದ, ಕಾಶಿನಾಥ ಭಂಗೂರೆ ತತ್ವಪದ, ಇಂದುಮತಿ ಬೀಸುವ ಪದ, ಶೋಭಾವತಿ ಕುಟ್ಟುವ ಪದ, ಸುವರ್ಣಾ ಐರಾಣಿ ಪದ, ಸಂತೋಷಕುಮಾರ ಹಂತಿ ಪದ, ಸುಶೀಲಮ್ಮ ಮೋಹರಂ ಪದ, ಸಂಗಮ್ಮ ಸಾಂಪ್ರದಾಯಿಕ ಪದ ಹಾಡಿ ರಂಜಿಸಿದರು. ವಿದ್ಯಾನಗರ ಕಲಾ ತಂಡದ ಕಲಾವಿದರು ವಚನ ಗಾಯನ ಹಾಗೂ ಲಕ್ಷ್ಮಿ ತಂಡದವರು ಸಾಂಪ್ರದಾಯಿಕ ಪದ ಪ್ರಸ್ತುತಪಡಿಸಿದರು.

ಪ್ರೋತ್ಸಾಹ ಅಗತ್ಯ: ಜಾನಪದ ಕಲೆ ಹಾಗೂ ಕಲಾವಿದರಿಗೆ ಪ್ರೋತ್ಸಾಹ ನೀಡುವುದು ಅಗತ್ಯವಾಗಿದೆ ಎಂದು ಜಾನಪದ ಸಂಭ್ರಮ ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ ಹೇಳಿದರು. ಕಲೆ ಹಾಗೂ ಕಲಾವಿದರ ಬೆಳವಣಿಗೆಗೆ ಜಾನಪದ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ನಡೆಯಬೇಕು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಮಾತನಾಡಿ, ಜಾನಪದ ಕಲಾ ಪ್ರಕಾರಗಳ ಉಳಿವಿಗೆ ಯುವ ಶಕ್ತಿ ಆಸಕ್ತಿ ತೋರಬೇಕಿದೆ ಎಂದು ಹೇಳಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಕಲೆ ಹಾಗೂ ಕಲಾವಿದರಿಗೆ ಉತ್ತೇಜನ ನೀಡುತ್ತಾ ಬಂದಿದೆ ಎಂದು ತಿಳಿಸಿದರು. ಮುಖಂಡ ವಿಠ್ಠಲರಾವ್ ಭಂಗೂರೆ ಮಾತನಾಡಿದರು. ಚಿಂತಕಿ ಗಾಯತ್ರಿ ಮೇತ್ರೆ ವಿಶೇಷ ಉಪನ್ಯಾಸ ನೀಡಿದರು.

ಜೈ ಭವಾನಿ ಮಹಿಳಾ ಸಂಘದ ಅಧ್ಯಕ್ಷೆ ಲಕ್ಷ್ಮಿಬಾಯಿ ಚಿದ್ರಿ ಉಪಸ್ಥಿತರಿದ್ದರು. ಸಂಘದ ಅಧ್ಯಕ್ಷೆ ಕಾಂಚನಾ ಸ್ವಾಗತಿಸಿದರು. ಎಂ.ಪಿ. ವೈಜಿನಾಥ ನಿರೂಪಿಸಿದರು. ಅಂಜಲಿ ವಂದಿಸಿದರು.

# ಅಧಿಕ ಮಾಸ ಸಮಾಪ್ತಿ ಅಂಗವಾಗಿ ಮಹದೇವ ದೇವಸ್ಥಾನದಲ್ಲಿ ವಿಶೇಷ ಪೂಜೆ

ಬೀದರ್: ನಗರದ ಶಾಸ್ತ್ರಿ ನಗರದಲ್ಲಿರುವ ಪುರಾತನ ಮಹದೇವ ದೇವಸ್ಥಾನದಲ್ಲಿ ಮಾತೆಯರ ಸಂಘದ ವತಿಯಿಂದ ಅಧಿಕ ಮಾಸ ಸಮಾಪ್ತಿ ಅಂಗವಾಗಿ ವಿಶೇಷ ಪೂಜೆ, ಭಜನೆ, ಆರತಿ ಹಾಗೂ ಪ್ರಸಾದ ವಿತರಣಾ ಕಾರ್ಯಕ್ರಮಗಳು ಭಕ್ತಿಭಾವದಿಂದ ಜರುಗಿದವು.

ಮೈಲೂರ್ ರಸ್ತೆಯ ಶಾಸ್ತ್ರಿ ನಗರದಲ್ಲಿರುವ ಈ ಪುರಾತನ ಉದ್ಭವ ಶಿವಲಿಂಗ ದೇವಾಲಯದಲ್ಲಿ ಅಧಿಕ ಮಾಸದ ನಿಮಿತ್ತ ಕಳೆದ ಒಂದು ತಿಂಗಳಿನಿಂದ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಹಿಂದೂ ಧರ್ಮದ ಸಂಪ್ರದಾಯದಂತೆ ಪ್ರತಿ ಮೂರು ವರ್ಷಗಳಿಗೊಮ್ಮೆ ಬರುವ ಅಧಿಕ ಮಾಸವನ್ನು ಅತ್ಯಂತ ಪವಿತ್ರ ಮಾಸವೆಂದು ಪರಿಗಣಿಸಲಾಗುತ್ತಿದ್ದು, ಈ ಅವಧಿಯಲ್ಲಿ ನೂರಾರು ಮಹಿಳೆಯರು ಪ್ರತಿದಿನ ದೇವಾಲಯದಲ್ಲಿ ಪೂಜೆ, ಆರತಿ, ಭಜನೆ ಹಾಗೂ ಧಾರ್ಮಿಕ ಪ್ರವಚನಗಳಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಬೀದರ್ ಕ್ಷೇತ್ರದ ಮುಖಂಡರಾದ ಈಶ್ವರ ಸಿಂಗ್ ಠಾಕೂರ್ ಅವರು ಮಹದೇವನ ದರ್ಶನ ಪಡೆದು ಮಾತನಾಡಿ, ಅಧಿಕ ಮಾಸವು ಸನಾತನ ಧರ್ಮದ ಪರಂಪರೆಯಲ್ಲಿ ಅತ್ಯಂತ ಮಹತ್ವದ ಸ್ಥಾನ ಪಡೆದಿದ್ದು, ಈ ಮಾಸದಲ್ಲಿ ಮಾಡಿದ ಜಪ, ತಪ, ದಾನ, ಧರ್ಮ ಹಾಗೂ ದೇವರ ಆರಾಧನೆಗೆ ವಿಶೇಷ ಪುಣ್ಯಫಲ ದೊರೆಯುತ್ತದೆ ಎಂದು ಹೇಳಿದರು.

ಇಂದಿನ ಆಧುನಿಕ ಯುಗದಲ್ಲಿ ಭಾರತೀಯ ಸಂಸ್ಕೃತಿ, ಸಂಪ್ರದಾಯ ಮತ್ತು ಧಾರ್ಮಿಕ ಮೌಲ್ಯಗಳನ್ನು ಉಳಿಸಿ ಬೆಳೆಸುವಲ್ಲಿ ಮಹಿಳೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಯುವ ಪೀಳಿಗೆಗೆ ಸನಾತನ ಸಂಸ್ಕೃತಿಯ ಮಹತ್ವವನ್ನು ಪರಿಚಯಿಸುವ ಕಾರ್ಯ ಮಾಡಿದ್ದಾರೆ ಎಂದು ಅವರು ಶ್ಲಾಘಿಸಿದರು.

ಶಾಸ್ತ್ರಿ ನಗರದ ಈ ಪುರಾತನ ಮಹದೇವ ದೇವಸ್ಥಾನವು ಅನೇಕ ವರ್ಷಗಳ ಇತಿಹಾಸ ಹೊಂದಿದ್ದು, ಭಕ್ತರ ಭಕ್ತಿಯ ಕೇಂದ್ರವಾಗಿದೆ. ದೇವರ ಕೃಪೆಯಿಂದ ಎಲ್ಲರ ಜೀವನದಲ್ಲಿ ಸುಖ, ಶಾಂತಿ, ಆರೋಗ್ಯ ಮತ್ತು ಸಮೃದ್ಧಿ ನೆಲೆಸಲಿ. ಸಮಾಜದಲ್ಲಿ ಸಹೋದರತ್ವ, ಸೌಹಾರ್ದತೆ ಹಾಗೂ ಧಾರ್ಮಿಕ ಮೌಲ್ಯಗಳು ಇನ್ನಷ್ಟು ಬಲಗೊಳ್ಳಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ನಿಕಟ ಪೂರ್ವ ಅಧ್ಯಕ್ಷ ಹನುಮಂತ ಬುಳ್ಳ, ದೀಪಕ್ ಸಿಂಗ್ ವಾಲ್ಮೀಕಿ, ಸಂತೋಷ್, ಸುನಿತಾ, ಕವಿತಾ, ಕಲ್ಪನಾ, ಸರುಬಾಯಿ, ಹೇಮಲತಾ, ಸಂಗೀತಾ, ರಾಜಮ್ಮ, ಕಾಶಿಬಾಯಿ, ಚಂದ್ರಕಲಾ, ಭಾರತಿ, ಪಾರ್ವತಿ, ಪ್ರಭಾವತಿ, ವಂದನಾ, ಜಗದೇವಿ, ಗೀತಾ, ದೇವಿಕಾ, ವಿಮಲಾಬಾಯಿ, ಸಂಗೀತಾ, ರೇಣುಕಾ ಸೇರಿದಂತೆ ಹಲವಾರು ಮಹಿಳೆಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಮಾತೆಯರ ಸಂಘದ ಸದಸ್ಯರು ಕಾರ್ಯಕ್ರಮದ ಯಶಸ್ಸಿಗೆ ಶ್ರಮವಹಿಸಿದ್ದು, ಕೊನೆಯಲ್ಲಿ ಮಹಾಪ್ರಸಾದ ವಿತರಣೆ ನಡೆಯಿತು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮಹದೇವನ ಕೃಪೆಗೆ ಪಾತ್ರರಾದರು




# ಕೇಳುತ್ತಿಲ್ಲ ಚಿಕ್ಕನಂದಿ, ಹತ್ವಾಳು ರೈತರ ಗೋಳು । ಅನಿರ್ದಿಷ್ಟಾವಧಿ ಧರಣಿಗೆ ನಿರ್ಧಾರ

## 700 ಎಕರೆ ಕೃಷಿ ಜಮೀನಿಗೆ ಸರ್ಕಾರಿ ಬೀಳು ನಮೂದು :ರೈತರು ಅಳಲು

■ ಉದಯರಶ್ಮಿ ದಿನಪತ್ರಿಕೆ

ಎಚ್ ಡಿ ಕೋಟೆ :ಕಳೆದ 40-50 ವರ್ಷಗಳಿಂದಲೂ ಅದೇ ಭೂಮಿಯಲ್ಲಿ ವ್ಯವಸಾಯ ಮಾಡಿಕೊಂಡು ಬರುತ್ತಿದ್ದೇವೆ. ಆರ್ ಟಿ ಸಿ ಕೂಡ ನಮ್ಮ ಹೆಸರಿನಲ್ಲಿ ಇದೆ. ಆದರೆ ಪಹಣಿಯಲ್ಲಿ ಸರಕಾರಿ ಬೀಳು ಭೂಮಿ ಎಂದು ನಮೂದಾಗಿದೆ. ಇದರಿಂದ ನಮಗೆ ಯಾವುದೇ ಸರಕಾರಿ ಸೌಲಭ್ಯಗಳು ಸಿಗುತ್ತಿಲ್ಲ. ಬ್ಯಾಂಕ್‌ಗಳಿಂದ ಸಾಲ ಪಡೆಯಲು ಆಗುತ್ತಿಲ್ಲ. ನಮ್ಮ ಹೆಸರಿಗೆ ಭೂಮಿ ಇದ್ದರೂ ಇಲ್ಲದಂತಾಗಿದೆ. ಖಾತೆಯಲ್ಲಿ ಸರಕಾರಿ ಬೀಳು ತೆಗೆದುಹಾಕಿ ಬದಲಾವಣೆ ಮಾಡಿ ಕೊಡುವಂತೆ ಸಂಬಂಧಪಟ್ಟ ಇಲಾಖೆ, ಸ್ಥಳೀಯ ಶಾಸಕರು, ಅಧಿಕಾರಿಗಳಿಗೆ ಮನವಿ ಮಾಡುತ್ತಾ ಬಂದಿದ್ದರೂ ಏನು ಪ್ರಯೋಜನವಾಗಿಲ್ಲ ಎಂದು ತಾಲೂಕಿನ ಚಿಕ್ಕನಂದಿ, ಹತ್ವಾಳು ರೈತರು ಅಳಲು ತೋಡಿಕೊಳ್ಳುತ್ತಾರೆ.

ತಾಲೂಕಿನ ಹಂಪಾಪುರ ಹೋಬಳಿ ವ್ಯಾಪ್ತಿಗೆ ಸೇರಿದ ಚಿಕ್ಕನಂದಿ, ಹತ್ವಾಳು ಗ್ರಾಮದ ವ್ಯಾಪ್ತಿಯಲ್ಲಿ ಸುಮಾರು 700 ಎಕರೆ ಕೃಷಿ ಜಮೀನು ಸಕಾರಣವಿಲ್ಲದೆ ಸರ್ಕಾರಿ ಬೀಳು ಎಂದು ಸಮುದಾಗಿರುವುದರಿಂದ ಉಂಟಾಗಿರುವ ಗೋಳು ರೈತರ ನೆಮ್ಮದಿ ಹಾಳು ಮಾಡಿದೆ. 1991ರಲ್ಲಿ ಅಂದಿನ ಸರ್ಕಾರ, ಕಂದಾಯ ಬಾಕಿಯಿಂದಾದ ಹಾಗೂ ಬೀಳು ಬಿದ್ದ ಜಮೀನುಗಳನ್ನು ಸ್ವಾಧೀನಾನುಭವದಲ್ಲಿರುವ ಹಾಗೂ ಅವರ ವಂಶಸ್ಥರ ಹೆಸರಿಗೆ ರೆಸ್ಟೋರ್ ಮಾಡಿಕೊಡುವಂತೆ ಆದೇಶ ಹೊರಡಿಸಿತ್ತು. ಆಗಿದ್ದ ತಹಸೀಲ್ದಾರ್, ಕಂದಾಯಾಧಿಕಾರಿಗಳ ಬೇಜವಾಬ್ದಾರಿಯಿಂದಾಗಿ ಕಾರ್ಯರೂಪಕ್ಕೆ ಬರಲಿಲ್ಲ. 2004ರಲ್ಲಿ ಸರ್ಕಾರ 6 ತಿಂಗಳ ಕಾಲಾವಕಾಶ ನೀಡಿ ಮತ್ತೆ ರೆಸ್ಟೋರ್‌ಗೆ ಆದೇಶಿಸಿತ್ತು. ಆದರೆ ಆಗಿನ ತಹಸೀಲ್ದಾರ್ ಕೂಡ ಕಾರ್ಯರೂಪಕ್ಕೆ ತರುವ ಕೆಲಸ ಮಾಡಲಿಲ್ಲ. ನಂತರದ ದಿನಗಳಲ್ಲಿ ಈ ಕ್ಷೇತ್ರದ ಯಾವ ಚುನಾಯಿತ ಸಂಸದರಾಗಲೀ, ಶಾಸಕರಾಲೀ ಈ ರೈತರ ನೆರವಿಗೆ ಬರಲಿಲ್ಲ.

> "ತಹಸೀಲ್ದಾರ್ ಕಳಿಸಿದ ವರದಿ ಜಿಲ್ಲಾಧಿಕಾರಿ ಕಚೇರಿಯಲ್ಲೋ ಹುಣಸೂರಿನ ಉಪವಿಭಾಗಾಧಿಕಾರಿ ಕಚೇರಿಯಲ್ಲೋ ಯಾವ ಮೂಲೆಯಲ್ಲಿ ಬಿದ್ದು ನಿದ್ರಿಸುತ್ತಿವೆಯೋ ಗೊತ್ತಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳಿಸಿದ್ದಾರೋ ಇಲ್ಲವೋ ಇದಕ್ಕೂ ಖಚಿತ ಮಾಹಿತಿ ಲಭ್ಯವಿಲ್ಲ. ತಾಲೂಕು ಕಚೇರಿಯಲ್ಲಿ ವಿಚಾರಿಸಿದರೆ ಒಂದೊಂದು ಹೇಳಿಕೆ. ಡಿಸಿಗೆ ಕಳಿಸಿದ್ದೇವೆ ಹುಣಸೂರು ಎಸಿಗೆ ಕಳಿಸಿದ್ದೇವೆ ಅಂತ ಸಬೂಬು ಹೇಳುತ್ತಾರೆ. ನಮಗೂ ತಾಳ್ಮೆ ಇಲ್ಲದಂತಾಗಿದೆ. ಹೀಗಾಗಿ ಶೀಘ್ರದಲ್ಲೇ ತಾಲೂಕು ಕಚೇರಿ ಮುಂದೆ ಅನಿರ್ದಿಷ್ಟಾವಧಿ ಧರಣಿ ಮಾಡುತ್ತೇವೆ."
>
> ■ ಸಣ್ಣಸ್ವಾಮಿ, ಹತ್ವಾಳು ರೈತರು

ಸರ್ಕಾರದ ಗಮನ ಸೆಳೆಯಲಿಲ್ಲ. ಹೀಗಾಗಿ ಅವರ ಹೆಸರಿನಲ್ಲಿ ಖಾತೆ ಇದ್ದರೂ ಸರ್ಕಾರಿ ಬೀಳು ಎಂದು ನಮೂದಾಗಿರುವುದರಿಂದ, ನಮಗೆ ಸರ್ಕಾರದಿಂದ ಯಾವುದೇ ಸೌಲಭ್ಯಗಳು ಸಿಗುತ್ತಿಲ್ಲ ಅಂತಾರೆ ಹತ್ವಾಳು ರೈತರು. ಈ ಸಂಬಂಧ ಕರ್ನಾಟಕ ಭೂ ಹಕ್ಕು ವೇದಿಕೆ ರೈತರ ಜೊತೆಗಿನ ಸಂವಾದಕ್ಕೆ ವೇದಿಕೆ ಕಲ್ಪಿಸಿಕೊಟ್ಟಿತ್ತು. ಈ ವೇಳೆ ರೈತರು ತಮ್ಮ ಅಳಲು ಬಿಚ್ಚಿಟ್ಟರು. ಸರ್ಕಾರಿ ಬೀಳು ತೆಗೆದುಹಾಕಿ ಕೊಡುವಂತೆ ತಹಸೀಲ್ದಾರ್, ಉಪವಿಭಾಗಾಧಿಕಾರಿ, ಜಿಲ್ಲಾಧಿಕಾರಿಗೆ ಮನವಿ ಪತ್ರ ಕೊಟ್ಟಿದ್ದೇವೆ. ಆದರೆ ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಶಾಸಕ ಅನಿಲ್ ಚಿಕ್ಕಮಾದು ಅವರ ಗಮನಕ್ಕೂ ಕೂಡ ತಂದಿದ್ದೇವೆ. ಆದರೆ ಅವರು ಕೂಡ ಕ್ರಮ ಕೈಗೊಂಡಿಲ್ಲ ಎಂದು ರೈತ ಸುಬ್ಬಣ್ಣ ಆರೋಪ ಮಾಡುತ್ತಾರೆ. ಈ ವೇಳೆ ರಾಮಾಚಾರಿ, ಸಣ್ಣಸ್ವಾಮಿ, ಸುಬ್ಬಣ್ಣ, ಶಿವಕುಮಾರ್, ರಾಜಣ್ಣ, ಚಿಕ್ಕಶೆಟ್ಟಿ, ಶಿವಪ್ಪ ಸೇರಿದಂತೆ ಚಿಕ್ಕನಂದಿ, ಹತ್ವಾಳು ಗ್ರಾಮಸ್ಥರು ಉಪಸ್ಥಿತರಿದ್ದರು.

# ಪಟ್ಟಣ ಬಂದ್ ಮಾಡಿ ಸಚಿವ ಸ್ಥಾನಕ್ಕೆ ಬೇಡಿಕೆ ಇಡೋದು ಇದೆಂಥ ನ್ಯಾಯ? ಎಂದ ಡಿಎಸ್‌ಎಸ್ ಮುಖಂಡರು

## ಬಲವಂತವಾಗಿ ಅಂಗಡಿ ಮುಚ್ಚಿಸಿದರೆ ಪ್ರತಿಭಟನೆ ಎಚ್ಚರಿಕೆ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಬಂದ್ ನೆಪದಲ್ಲಿ ಅಂಗಡಿ-ಮಳಿಗೆಗಳನ್ನು ಒತ್ತಾಯಪೂರ್ವಕವಾಗಿ ಮುಚ್ಚಿಸಲು ಪ್ರಯತ್ನಿಸಿದರೆ ಉಗ್ರವಾಗಿ ಪ್ರತಿಭಟಿಸುವದಾಗಿ ಡಿಎಸ್‌ಎಸ್ ಮುಖಂಡರಾದ ಬಾಲಚಂದ್ರ ಹುಲ್ಲೂರ ಮತ್ತು ಬಸವರಾಜ ಸಿದ್ದಾಪೂರ ಎಚ್ಚರಿಸಿದರು.

ಸ್ಥಳೀಯ ಶಾಸಕ ಸಿ.ಎಸ್.ನಾಡಗೌಡರಿಗೆ ಮಂತ್ರಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಜು19 ರಂದು ಮುದ್ದೇಬಿಹಾಳ ಪಟ್ಟಣ ಬಂದ್ ಕರೆ ನೀಡಿರುವ ಹಿನ್ನೆಲೆ ಸುದ್ದಿಗಾರರನ್ನು ಉದ್ದೇಶಿಸಿ ಅವರು ಮಾತನಾಡಿದರು.

ಶಾಸಕರಿಗೆ ಸಚಿವ ಸ್ಥಾನ ನೀಡಲು ನಮ್ಮದೇನು ಅಭ್ಯಂತರವಿಲ್ಲ. ಅದಕ್ಕೆ ಹೋರಾಟ ಮಾಡುವದಕ್ಕೂ ನಮ್ಮ ವಿರೋಧವಿಲ್ಲ. ಆದರೆ ಬಂದ್ ಕರೆಗೆ ನಮ್ಮ ತೀವ್ರ ವಿರೋಧ ಇದೆ. ಯಾಕೆಂದರೆ ಪ್ರತೀ ದಿನ ಹಲವಾರು ಬಡವರು ತಾಲೂಕಿನ ಬಹುತೇಕ ಹಳ್ಳಿಗಳಿಂದ ಬೆಳ್ಳಂಬೆಳಿಗ್ಗೆ ಹಾಲು, ಮೊಸರು, ತರಕಾರಿ ಅಂತಾ ಪಟ್ಟಣಕ್ಕೆ ಬಂದು ವ್ಯಾಪಾರ ಮಾಡಿ, ಅದರಿಂದ ಬಂದ ದುಡ್ಡಿನಿಂದ ಅವತ್ತಿನ ದಿನ ಸಾಗಿಸುವ ಅದೆಷ್ಟೋ ಕುಟುಂಬಗಳಿವೆ. ಮೊದಲೇ ಬರಗಾಲ ಅಂಥದರಲ್ಲಿ ಪಟ್ಟಣ ಬಂದ್ ಮಾಡಿ ಸಚಿವ ಸ್ಥಾನಕ್ಕೆ ಬೇಡಿಕೆ ಇಡೋದು ಇದೆಂಥ ನ್ಯಾಯ? ನಮ್ಮ ಶಾಸಕರ ಕಾರ್ಯ ವೈಖರಿಯನ್ನ ಗುರುತಿಸಿ ಅವರ ಹೈ ಕಮಾಂಡ್ ಸಚಿವ ಸ್ಥಾನ ನೀಡಬೇಕು. ಹೀಗಿರುವಾಗ ಪಟ್ಟಣ ಬಂದ್ ಮಾಡಿ ಜನಸಾಮಾನ್ಯನ ಹೊಟ್ಟೆಯ ಮೇಲೆ ಹೊಡೆದು ಸಚಿವ ಸ್ಥಾನಕ್ಕೆ ಬೇಡಿಕೆ ಇಡೋದು ಸರಿಯಲ್ಲ.

ಅಷ್ಟಕ್ಕೂ ಬಂದ್ ಮಾಡೋದಕ್ಕೂ ಸಚಿವ ಸ್ಥಾನಕ್ಕೂ ಯಾವುದೇ ಸಂಬಂಧವಿಲ್ಲ. ಹೋರಾಟ ಮಾಡುವದು ಅವರವರ ಹಕ್ಕು, ಅದಕ್ಕೆ ನಮ್ಮ ತಕರಾರಿಲ್ಲ. ಆದರೆ ಯಾರಾದರೂ ಅಂಗಡಿಕಾರರಿಗೆ ಒತ್ತಾಯ ಮಾಡುವದಾಗಲೀ, ಬೆದರಿಕೆ ಹಾಕುವದಾಗಲೀ ಮಾಡಿದರೆ ಸಾವು ಸಹಿಸಲ್ಲ. ಕೂಡಲೇ ಅನಿವಾರ್ಯವಾಗಿ ಹೋರಾಟಕ್ಕೆ ಇಳಿಯುತ್ತೇವೆ ಎಂದು ಎಚ್ಚರಿಸಿದರು.

# ಜಿಲ್ಲೆ, ತಾಲೂಕು ನೋಡಲ್ ಅಧಿಕಾರಿ ನೇಮಕ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ ಐಆರ್) ಕಾರ್ಯಕ್ಕೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರನ್ನು ಜಿಲ್ಲಾ ನೋಡಲ್ ಅಧಿಕಾರಿಯನ್ನಾಗಿ ಹಾಗೂ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ತಾಲೂಕು ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಿ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಆದೇಶ ಹೊರಡಿಸಿದ್ದಾರೆ.

ಜಿಲ್ಲಾ ನೋಡಲ್ ಅಧಿಕಾರಿ, ಡಿಡಿಪಿಐ ಮೊ: 9110839701,ವಿಜಯಪುರ ನಗರ ಬಿಇಒ ಅವರನ್ನು ತಾಲೂಕು ನೋಡಲ್ ಅಧಿಕಾರಿಯನ್ನಾಗಿ ವಿಜಯಪುರ ನಗರಕ್ಕೆ ವಹಿಸಿಕೊಡಲಾಗಿದೆ.

ವಿಜಯಪುರ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ವಿಜಯಪುರ ಗ್ರಾಮೀಣ, ತಿಕೋಟಾ ಹಾಗೂ ಬಬಲೇಶ್ವರ ತಾಲೂಕು ವಹಿಸಿಕೊಡಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ. ಬಸವನಬಾಗೇವಾಡಿ ಕ್ಷೇತ್ರ ಶಿಕ್ಷಣಾಧಿಕಾರಿಗೆ ಬಸವನಬಾಗೇವಾಡಿ, ಕೊಲ್ಹಾರ ಹಾಗೂ ನಿಡಗುಂದಿ ತಾಲೂಕಾ ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ. ಮುದ್ದೇಬಿಹಾಳ ಕ್ಷೇತ್ರ ಶಿಕ್ಷಣಾಧಿಕಾರಿಗೆ ಮುದ್ದೇಬಿಹಾಳ ಹಾಗೂ ತಾಳಿಕೋಟೆ ತಾಲೂಕು ನೋಡಲ್ ಅಧಿಕಾರಿಯಾದರೆ, ಇಂಡಿ ಕ್ಷೇತ್ರ ಶಿಕ್ಷಣಾಧಿಕಾರಿಗೆ ಇಂಡಿ ವಹಿಸಿದರೆ, ಚಡಚಣ ಬಿಇಒಗೆ ಚಡಚಣ ತಾಲೂಕು ನೋಡಲ್ ಜವಾಬ್ದಾರಿ ನೀಡಲಾಗಿದೆ. ಸಿಂದಗಿ ಕ್ಷೇತ್ರ ಶಿಕ್ಷಣಾಧಿಕಾರಿಗೆ ಸಿಂದಗಿ, ದೇವರಹಿಪ್ಪರಗಿ ಮತ್ತು ಆಲಮೇಲ ತಾಲೂಕು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಂಜಾರ ಸಂಸ್ಕೃತಿ ಮತ್ತು ಭಾಷೆ ಉಳಿಸಿ ಬೆಳೆಸಿ :ಚವ್ಹಾಣ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಆದರ್ಶ ನಗರದ ಶ್ರೀ ಸಂತ ಸೇವಾಲಾಲ ದೇವಸ್ಥಾನದಲ್ಲಿ ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಬೆಂಗಳೂರು, ವತಿಯಿಂದ ಜೂ.18 ರಿಂದ 20 ವರೆಗೆ ನಡೆಯಲಿರುವ "ಬಂಜಾರ ಯುವಕ-ಯುವತಿಯರಿಗೆ ಹವೇಲಿ, ವಳಂಗ, ವಿತಿ, ಕಡಿ ಕಸಳಾತ, ಸಿಕವಾಡಿ" ಕುರಿತು ಮೂರು ದಿನಗಳ ಕಾರ್ಯಾಗಾರಕ್ಕೆ ಚಾಲನೆ ನೀಡಲಾಯಿತು.

ಕಾರ್ಯಾಗಾರವನ್ನು ಉದ್ಘಾಟಿಸಿದ ಡಾ. ಮೋತಿಲಾಲ ರೂ ಚವ್ಹಾಣ ಅಧ್ಯಕ್ಷರು, ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಅವರು ಮಾತನಾಡಿ, ಬಂಜಾರ ಅಕಾಡೆಮಿಯು ಬಂಜಾರ ಸಂಸ್ಕೃತಿಯನ್ನು ಉಳಿಸಲು ಹಗಲಿರುಳು ಕಾರ್ಯವನ್ನು ನಿರ್ವಹಿಸುತ್ತಿದೆ. ಬಂಜಾರ ಭಾಷೆ ಉಳಿಸಲು ಇಂದು ಎಲ್ಲಾ ಬಂಜಾರರು ತಮ್ಮ ಮನೆಗಳಲ್ಲಿ ಲಂಬಾಣಿ ಭಾಷೆಯನ್ನು ಮಾತನಾಡಬೇಕು. ಮಕ್ಕಳಿಗೂ ಕೂಡ ಲಂಬಾಣಿ ಭಾಷೆ ಕಲಿಸಿ ಆ ಮೂಲಕ ಭಾಷೆ ಉಳಿಸಲು ಶ್ರಮಿಸಬೇಕು. ಬಂಜಾರ ಸಂಸ್ಕೃತಿ ಮತ್ತು ಭಾಷೆ ಉಳಿಸಲು ಬಂಜಾರ ಅಕಾಡೆಮಿಯು ಎಲ್ಲ ರೀತಿಯ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಸಿದ್ಧವಾಗಿದೆ. ಯುವಕರು ಮತ್ತು ಯುವತಿಯರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಮಹಾನಗರ ಪಾಲಿಕೆಯ ಉಪಮೇಯರ ಅಗಿರುವ ಸುಮಿತ್ರಾ ಜಾಧವ ಅವರು, ಬಂಜಾರ ಯುವತಿಯರು ಹವೇಲಿ ಢಾವಲೊ ವಳಲಂಗ ಕಲಿಯಬೇಕೇಂದರು.

ಬಿ.ಡಿ. ಚವ್ಹಾಣ ನಿವೃತ್ತ ಮುಖ್ಯೋಪಾಧ್ಯಾಯರು ಮಾತನಾಡುತ್ತಾ, ನಮ್ಮ ತಾಯಿಂದರು ಬಂಜಾರ ಸಂಸ್ಕೃತಿಯನ್ನು ಉಳಿಸಿಕೊಂಡು ಬಂದಿರುವರು. ಇಂದಿನ ಯುವ ಪೀಳಿಗೆ ಈ ಸಂಸ್ಕೃತಿಯನ್ನು ಉಳಿಸುವ ಜವಾಬ್ದಾರಿಯನ್ನು ಹೊತ್ತುಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ ಮಾಜಿ ಜಿ.ಪಂ. ಸದಸ್ಯ ರಾಜಪಾಲ ಚವ್ಹಾಣ ಅವರು, ಇಂತಹ ಕಾರ್ಯಕ್ರಮಗಳನ್ನು ರೂಪಿಸಿಕೊಂಡು ಇಂದಿನ ಯುವಕರಿಗೆ ಬಂಜಾರ ಸಂಸ್ಕೃತಿ ಮತ್ತು ಭಾಷೆ ಕುರಿತು ಅರಿವು ಮೂಡಿಸುವ ಅವಶ್ಯಕತೆ ಇದೆ ಎಂದರು. ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಸುರೇಶ ಠಾಕ್ಯಾಪ್ಪ ಲಮಾಣಿ ಮತ್ತು ಸಂಗೀತಾ ನಾಯಕ ಅವರು ಯುವಕ ಯುವತಿಯರಿಗೆ ಬಂಜಾರ ಸಂಸ್ಕೃತಿಯ ಕುರಿತು ತರಬೇತಿ ನೀಡಿದರು.

ಶ್ರೀಮತಿ ಸಾಂಗಿಬಾಯಿ ಚವ್ಹಾಣ ಮುಖ್ಯಅತಿಥಿಯಾಗಿ ಭಾಗವಹಿಸಿದರು.

ವಸಂತ ಲಮಾಣಿ ಪ್ರಾರ್ಥಿಸಿದರು. ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಸದಸ್ಯೆ ಡಾ.ಸುರೇಖಾ ಜಿ ರಾಠೋಡ ಪ್ರಾಸ್ತಾವಿಕ ಮತ್ತು ಸ್ವಾಗತ ಭಾಷಣ ಮಾಡಿದರು. ಕು.ಮಂಜುಳಾ ಚವ್ಹಾಣ ನಿರೂಪಿಸಿದರು. ಕೋಮಲ ಚವ್ಹಾಣ ವಂದನಾರ್ಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ಶಾಂತಾಬಾಯಿ ರಾಠೋಡ, ಶಾನು ರಾಠೋಡ, ರವಿ ರಾಠೋಡ, ಶಂಕರ ರಾಠೋಡ ಮತ್ತಿತರರು ಉಪಸ್ಥಿತರಿದ್ದರು.

# ರುದ್ರಪ್ಪ ಲಮಾಣಿಗೆ ಸಚಿವ ಸ್ಥಾನ ನೀಡಲು ಬಂಜಾರಾ ಸಮಾಜ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬಂಜಾರಾ ಸಮಾಜದ ಕಾಂಗ್ರೆಸ್ ಶಾಸಕ ರುದ್ರಪ್ಪ ಲಮಾಣಿ ಅವರನ್ನು ಸಚಿವ ಸ್ಥಾನ ನೀಡಬೇಕು ಎಂದು ಬಂಜಾರಾ ಸಮಾಜದ ಮುಖಂಡರು ಒಕ್ಕೊರಲಿನಿಂದ ಒತ್ತಾಯಿಸಿದರು.

ವಿಜಯಪುರ ಜಿಲ್ಲೆಯವರಿಗೆ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನ ನೀಡಬೇಕು ಎಂಬ ಹಕ್ಕೊತ್ತಾಯ ಮಂಡಿಸಿದರು. ಸಮಾಜದ ಪರವಾಗಿ ಮಾತನಾಡಿದ ಮಾಜಿ ಶಾಸಕ ಹಾಗೂ ಬಂಜಾರಾ ಸಮಾಜದ ಮುಖಂಡ ಮನೋಹರ ಐನಾಪೂರ ಮಾತನಾಡಿ, ಬಂಜಾರಾ ಸಮಾಜ ಲಕ್ಷಾಂತರ ಜನರಿದ್ದಾರೆ, ಬಡತನ ಅನುಭವಿಸಿ ಗುಳೇ ಹೋಗುವ ಸಮುದಾಯ, ಹೀಗಾಗಿ ಸಮುದಾಯದ ಮುಖಂಡರು ಸಚಿವರಾಗುವುದು ಹಾಗೂ ಸಮುದಾಯದ ಧುರೀಣರು ಜನಪ್ರತಿನಿಧಿಗಳಾಗಬೇಕಾಗಿರುವುದು ಅಗತ್ಯವಾಗಿದೆ ಎಂದರು.

ಪ್ರತಿ ಮತಕ್ಷೇತ್ರದಲ್ಲಿ ಬಂಜಾರಾ ಸಮಾಜ ಪ್ರಾಬಲ್ಯ ಹೊಂದಿದೆ, ಪ್ರಸ್ತುತ ಏಕೈಕ ಶಾಸಕರಾಗಿರುವ ಲಮಾಣಿ ಅವರಿಗೆ ಸಚಿವ ಸ್ಥಾನ ನೀಡಬೇಕು, ಉಪ ಸಭಾಧ್ಯಕ್ಷ ಒಂದು ಉತ್ತಮ ಹುದ್ದೆ, ಆದರೆ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನ, ಸಮಾಜ ಸಂಘಟನೆ ಕಷ್ಟ ಸಾಧ್ಯ, ಸಚಿವರಾದರೆ ಅತ್ಯಂತ ಅನುಕೂಲ ಇದು ಸಮಾಜದ ಒಕ್ಕೊರಲಿನ ಒತ್ತಾಯ ಎಂದರು. ಕಾಂಗ್ರೆಸ್ ಪಕ್ಷ ಬಂಜಾರಾ ಸಮಾಜಕ್ಕೆ ಪ್ರಾತಿನಿಧ್ಯ ನೀಡುತ್ತಲೇ ಬಂದಿದೆ, ಆದರೆ ಇತ್ತೀಚಿನ ದಿನದಲ್ಲಿ ಪ್ರಾತಿನಿಧ್ಯ ಕಡಿಮೆಯಾಗಿದೆ, ರಾಜ್ಯಸಭೆ, ವಿಧಾನ ಪರಿಷತ್ ನಮ್ಮ ಸಮುದಾಯಕ್ಕೆ ಪ್ರಾತನಿಧ್ಯ ದೊರಕಿಲ್ಲ. ಈ ಕೊರತೆಯನ್ನು ನೀಗಿಸಬೇಕಿದೆ ಎಂದರು.

ಜಿ.ಪಂ. ಮಾಜಿ ಸದಸ್ಯ ರಾಜಪಾಲ ಚವ್ಹಾಣ ಮಾತನಾಡಿ, ಸಾಮಾಜಿಕ ನ್ಯಾಯದ ಸೂತ್ರವಾಗಿ ಬಂಜಾರಾ ಸಮಾಜಕ್ಕೆ ಸಚಿವ ಸ್ಥಾನ ನೀಡಬೇಕಿತ್ತು, ಕಡಮೆ ಸಂಖ್ಯೆ ಇರುವ ಕ್ರಿಶ್ಚಿಯನ್ ಬಾಂಧವರಿಗೆ ಸಚಿವ ಸ್ಥಾನ ದೊರಕಿದೆ, ಕಾಂಗ್ರೆಸ್ ಬೆನ್ನೆಲುಬಾಗಿ ನಿಂತ ಬಂಜಾರಾಸಮಾಜಕ್ಕೆ ಅವಕಾಶ ನೀಡದಿರುವುದು ಯಾವ ನ್ಯಾಯ? ಎಂದು ಪ್ರಶ್ನಿಸಿದರು. ಮುಖಂಡ ಡಾ.ಬಾಬು ರಾಜೇಂದ್ರ ನಾಯಕ ಮಾತನಾಡಿ, ಬಂಜಾರಾ ಸಮಾಜ ಕೈ ಹಿಡಿದ ಪರಿಣಾಮ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿದೆ, ಆದರೆ ಸಚಿವ ಸ್ಥಾನ, ಲೋಕಸಭೆ, ವಿಧಾನ ಪರಿಷತ್ ಹೀಗೆ ಎಲ್ಲ ಕಡೆ ತಾರತಮ್ಯ ಸಮಾಜದಲ್ಲಿ ನೋವು ತರಿಸಿದೆ, ಬಂಜಾರಾ ಸಮಾಜದ ಧೋರಣೆಯನ್ನು ಕಾಂಗ್ರೆಸ್ ಕಡೆಗಣಿಸಬಾರದು ಎಂದರು.

ಮುಖಂಡ ಬಿ.ಬಿ. ಚವ್ಹಾಣ ಮಾತನಾಡಿದರು.

ಜಿ.ಪಂ. ಮಾಜಿ ಸದಸ್ಯೆ ಅನುಸೂಯಾ ಜಾಧವ, ನ್ಯಾಯವಾದಿ ಚಿತ್ರ ನಟ ರಾಹುಲ್ ಐನಾಪೂರ, ರಾಜಕುಮಾರ ಜಾಧವ, ಸುರೇಶ ಬಿಜಾಪೂರ ಮೊದಲಾದವರು ಉಪಸ್ಥಿತರಿದ್ದರು.

# ಕ್ಯಾಂಪಸ್ ಸಂದರ್ಶನದಲ್ಲಿ 94 ವಿದ್ಯಾರ್ಥಿಗಳು ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಸಂಗನಬಸವ ಮಹಾಸ್ವಾಮೀಜಿ ಪಾಲಿಟೆಕ್ನಿಕ್ ನಲ್ಲಿ ಜೂನ್ 16 ಮಂಗಳವಾರ ಮತ್ತು ಜೂನ್ 17 ಬುಧವಾರ ಎರಡು ದಿನ ನಡೆದ ಕ್ಯಾಂಪಸ್ ಸಂದರ್ಶನದಲ್ಲಿ 46 ಡಿಪ್ಲೋಮಾ ಮತ್ತು 48 ಐಟಿಐ ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.

ಧಾರವಾಡದ ನಿಡೆಕ್(ಓಋಆಇಏ) ಸಂಸ್ಥೆ ಮತ್ತು ಬಿ.ಎಲ್.ಡಿ.ಇ ಪಾಲಿಟೆಕ್ನಿಕ್ ಹಾಗೂ ಐಟಿಐ ವತಿಯಿಂದ ಆಯೋಜಿಸಲಾದ ಈ ಕ್ಯಾಂಪಸ್ ಸಂದರ್ಶನದಲ್ಲಿ ನಿಡೆಕ್ ಮುಖ್ಯ ವ್ಯವಸ್ಥಾಪಕ ಸೋಮಶೇಖರ, ವ್ಯವಸ್ಥಾಪಕ ಮಂಜುನಾಥ, ಮಾನವ ಸಂಪನ್ಮೂಲ ವಿಭಾಗದ ಚಂದನಾ ಹಾಗೂ ನಿಶ್ಮಿತಾ ಸಂದರ್ಶನ ನಡೆಸಿದರು.

ಈ ಸಂದರ್ಶನದಲ್ಲಿ ವಿಜಯಪುರ ಮತ್ತು ಸುತ್ತಮುತ್ತಲಿನ ಜಿಲ್ಲೆಗಳ ಡಿಪ್ಲೊಮಾ ಮೆಕ್ಯಾನಿಕಲ್, ಎಲೆಕ್ಟ್ರಿಕಲ್, ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ ವಿಭಾಗಗಳ ಒಟ್ಟು 60 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ನಾನಾ ಐಟಿಐ ವಿಭಾಗಗಳ 110ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಲಿಖಿತ ಪರೀಕ್ಷೆಯಲ್ಲಿ 52 ವಿದ್ಯಾರ್ಥಿಗಳನ್ನು ಆಯ್ಕೆಮಾಡಿ ಮೌಖಿಕ ಸಂದರ್ಶನ ನಡೆಸಲಾಯಿತು. ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಡಿಪ್ಲೊಮಾ ಕಾಲೇಜಿನ ಪ್ರಾಚಾರ್ಯ ಪ್ರಭುದೇವ ಬಿ ಕಳಸಗೊಂಡ, ಉದ್ಯೋಗಾಧಿಕಾರಿ ಸುಧನ್ವ ವಿ. ಕುಲಕರ್ಣಿ, ಸಂತೋಷ ಹಿರೇಮಠ, ಪಾಂಡುರಂಗ ಅಸ್ಲಂಕರ, ಐಟಿಐ ಉದ್ಯೋಗಾಧಿಕಾರಿ ವಾಗೀಶ ಮರೀಮಠ ಸೇರಿದಂತೆ ಎಲ್ಲ ವಿಭಾಗದ ಮುಖ್ಯಸ್ಥರು ಹಾಗೂ ಉಪನ್ಯಾಸಕರು ಉಪಸ್ಥಿತರಿದ್ದರು.

ಈ ನೇರ ಸಂದರ್ಶನದಲ್ಲಿ ಆಯ್ಕೆಯಾದ ಎಲ್ಲ ವಿದ್ಯಾರ್ಥಿಗಳಿಗೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ. ಬಿ. ಪಾಟೀಲ, ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಹಾಗೂ ಆಡಳಿತ ಮಂಡಳಿಯ ನಿರ್ದೇಶಕರು, ಕಾಲೇಜು ಹಾಗೂ ಐಟಿಐನ ಬೋಧಕ ಹಾಗೂ ಬೋಧಕರ ಹೊರತಾದ ಸಿಬ್ಬಂದಿ ಅಭಿನಂದನೆಗಳನ್ನು ತಿಳಿಸಿದ್ದಾರೆ.

# ವಿದ್ಯಾರ್ಥಿಗಳಲ್ಲಿ ಸಂಶೋಧನಾ ಆಸಕ್ತಿ & ಅಭಿರುಚಿ ಬೆಳೆಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಉನ್ನತ ಶಿಕ್ಷಣ ಗುರಿಯು ಕೇವಲ ವಿದ್ಯಾರ್ಥಿಗಳು ವಿಷಯ ಜ್ಞಾನ, ಅಂಕ ಮತ್ತು ಪದವಿ ಪಡೆಯುವದಕ್ಕಾಗಿ ಸಿಮೀತಗೊಳ್ಳಬಾರದು. ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯು ವಿದ್ಯಾರ್ಥಿಗಳಲ್ಲಿ ವಿಷಯ ಜ್ಞಾನದೊಂದಿಗೆ ಕಲಿತ ವಿಷಯಗಳ ಪ್ರಾಯೋಗಿಕ ಅಳವಡಿಕೆ, ಸೃಜನಾತ್ಮಕತೆ ಮತ್ತು ಕ್ರಿಯಾಶೀಲತೆಯೊಂದಿಗೆ ಆಯ್ಕೆ ಮಾಡಿಕೊಂಡ ಯಾವುದೇ ವಿಷಯದ ಮೇಲೆ ಸಂಶೋಧನೆ ಕೈಗೊಳ್ಳಬೇಕು. ವಿದ್ಯಾರ್ಥಿದೆಸೆಯಲ್ಲಿಯೇ ಸಂಶೋಧನೆಯಲ್ಲಿ ಆಸಕ್ತಿ, ಅಭಿರುಚಿ ಮತ್ತು ಹೊಸ ವಿಷಯಗಳತ್ತ ಬೆಳಕು ಚೆಲ್ಲುವಂತೆ ಪ್ರೇರೇಪಿಸಬೇಕಾಗಿರುವುದು ಇಂದಿನ ಅಗತ್ಯತೆಯಾಗಿದೆ ಎಂದು ವಿಜಯಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ಎಂ.ಎಸ್.ಖೊದ್ನಾಪೂರ ಅವರು ಅಭಿಪ್ರಾಯಪಟ್ಟರು.

ಅವರು ನಗರದ ಬಿ.ಎಲ್.ಡಿ.ಇ. ಸಂಸ್ಥೆಯ ಎ.ಎಸ್.ಪಾಟೀಲ ಸ್ವಾಯತ್ತ ಕಾಲೇಜಿನಲ್ಲಿ ವಾಣಿಜ್ಯಶಾಸ್ತ್ರ ವಿಭಾಗದ ವತಿಯಿಂದ ಬಿ.ಕಾಂ ಅಂತಿಮ ವರ್ಷದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ "ಪ್ರಾಜೆಕ್ಟ್ ರಿಪೋರ್ಟ ಮೌಖಿಕ ಸಂದರ್ಶನ" ವಿದ್ಯಾರ್ಥಿಗಳ ಸಂಶೋಧನಾ ಕೌಶಲ್ಯಗಳನ್ನು ಮೌಲ್ಯೀಕರಿಸಿ ಮಾತನಾಡುತ್ತಿದ್ದರು.

ಇಂದಿನ ಜಗತ್ತು ಹೊಸತನ, ನಾವಿನ್ಯತೆ, ಸಂಶೋಧನೆ ಮತ್ತು ಅನ್ವೇಷಣೆಗೆ ಆಹ್ವಾನ ಮತ್ತು ಅವಕಾಶಗಳನ್ನು ನೀಡುತ್ತಿದೆ. ವಿದ್ಯಾರ್ಥಿಗಳು ತಮ್ಮಲ್ಲಿರುವ ಸುಪ್ತ ಪ್ರತಿಭೆ, ಜ್ಞಾನ, ಕ್ರೀಯಾಶೀಲತೆ ಮತ್ತು ಸೃಜನಾತ್ಮಕತೆ, ವೈಚಾರಿಕತೆ,ಚಿಂತನಾಶಕ್ತಿ,ವಿಷಯ ಮಂಡನಾ ಕಲೆ, ಕೌಶಲ್ಯಗಳನ್ನು ಹೊರಹಾಕಲು ಹಾಗೂ ವಿದ್ಯಾರ್ಥಿಗಳ ಪ್ರತಿಭೆ ಅನಾವರಣಗೊಳ್ಳಲು ಉತ್ತಮ ವೇದಿಕೆಯನ್ನು ಕಲ್ಪಿಸಬೇಕು. ಸಂಶೋಧನೆಯು ಗುಣಾತ್ಮಕವಾಗಿದ್ದು, ಅದು ಸದಾ ಸಮುದಾಯಕ್ಕೆ ಏನನ್ನಾದರೂ ಕೊಡುಗೆ ನೀಡುವಂತಿರಬೇಕು. ಸಂಶೋಧನೆಯಿಂದ ಹೊರಹೊಮ್ಮುವ ಫಲಿತಾಂಶವು ಸಮಾಜಕ್ಕೆ ಪ್ರಯೋಜನಕಾರಿ ಮತ್ತು ಸರ್ಕಾರ, ಸಂಘ-ಸಂಸ್ಥೆ, ವಾಣಿಜ್ಯ-ವ್ಯಾಪಾರ ಮತ್ತು ಇನ್ನಿತರ ಸಂಸ್ಥೆಗಳಿಗೆ ಭವಿಷ್ಯಕ್ಕೆ ದಾರಿದೀಪವಾಗಿರಬೇಕು. ಅಂದಾಗ ಕೈಗೊಂಡ ಸಂಶೋಧನೆಯ ಉದ್ಧೇಶ ಮತ್ತು ಗುರಿಯು ನಿಜಕ್ಕೂ ಅರ್ಥಪೂರ್ಣವಾಗುತ್ತದೆ. ಪ್ರತಿ ವಿದ್ಯಾರ್ಥಿಯು ತಾವು ಸಂಶೋಧನೆಗಾಗಿ ಆಯ್ದುಕೊಂಡ ವಿಷಯದ ಮೇಲೆ ನಿರ್ದಿಷ್ಟ ಉದ್ದೇಶಗಳನ್ನು ರೂಪಿಸಿಕೊಂಡು ಅಧ್ಯಯನ ಮಾಡುತ್ತಾ, ಹಿಂದಿನ ಸಂಶೋಧನೆ ಬಗ್ಗೆ ಪರಿಶೀಲಿಸಿ, ಸಮೀಕ್ಷೆ ಕೈಗೊಂಡು ಅಗತ್ಯ ಪ್ರಾಥಮಿಕ ಮತ್ತು ಅನುಷಂಗಿಕ ಮೂಲಗಳಿಂದ ಮಾಹಿತಿ ಸಂಗ್ರಹಣೆ, ದತ್ತಾಂಶ ವಿಶ್ಲೇಷಣೆ ಮತ್ತು ಸಂಖ್ಯಾಶಾಸ್ತ್ರದ ಪದ್ಧತಿಗಳ ಅಳವಡಿಸಿಕೊಂಡು ಸಂಶೋಧನೆಯನ್ನು ಪರಿಮಾಣಾತ್ಮಕ ಮತ್ತು ಗುಣಾತ್ಮಕವನ್ನಾಗಿ ಕೈಗೊಂಡು ಸಾಮಾಜಿಕ ಕೊಡುಗೆ ನೀಡವಂತಾಗಬೇಕು ಎಂದು ಹೇಳಿದರು.

ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಬಿ.ಕಮತಿ, ಪರೀಕ್ಷಾ ನಿಯಂತ್ರಣಾಧಿ ಡಾ. ಭಾರತಿ ಮಠ, ವಾಣಿಜ್ಯಶಾಸ್ತ್ರ ಪ್ರಾಧ್ಯಾಪಕ ಪ್ರೊ. ವಿಜಯ ತಳವಾರ ಇನ್ನಿತರರು ಸಹ ಉಪಸ್ಥಿತರಿದ್ದರು.

ಮೌಖಿಕ ಸಂದರ್ಶನದಲ್ಲಿ ಬಿ.ಕಾಂ ಅಂತಿಮ ವರ್ಷದ ಎಲ್ಲ ವಿದ್ಯಾರ್ಥಿಗಳ ಕೈಗೊಂಡ ಪ್ರಾಜೆಕ್ಟ ರಿಪೋರ್ಟ ಮೌಖಿಕ ಸಂದರ್ಶನದಲ್ಲಿ ಉತ್ತಮ ರೀತಿಯಿಂದ ವಿಷಯ ಮಂಡನೆ ಮತ್ತು ಸಂವಹನ ಕಲೆಯನ್ನು ಅಭಿವ್ಯಕ್ತಪಡಿಸಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR